# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –207 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 08–03–2025 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 207 | RNI No: KARKAN/2023/88462 | KA/SK/CTA-874/2024-2026 | Chitradurga | Date: 08-03-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಲಜೀವನ್: ಅನುಷ್ಠಾನ, ಕಾರ್ಯಾಚರಣೆ, ನಿರ್ವಹಣೆ ಜವಾಬ್ದಾರಿಯುತವಾಗಿರಲಿ 2

ಮಹಿಳೆಯರಿಗೆ ಹೆಚ್ಚು ಸಾಲ ಒದಗಿಸಿ ಶೈಕ್ಷಣಿಕವಾಗಿ, ಸ್ವಾವಲಂಬಿಗಳನ್ನಾಗಿಸಿ 3

ಹಲಾಲ್ ಬಜೆಟ್ ಟೀಕೆ–ಬಿಜೆಪಿಯವರ ಕೊಳಕು ಮನಸ್ಥಿತಿ: ಸಿಎಂ ಸಿದ್ದರಾಮಯ್ಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಬಡವರ ಭಾಗ್ಯದಾತ ಡಾ: ಜೈಯರಾಮ್‌ನಾಯ್ಕ್ ಕೃಷಿ ಹೊಂಡದಲ್ಲಿ ಕಾಲುಜಾರಿಬಿದ್ದು ಸಾವು



ಹೊಸದುರ್ಗ: ತಾಲೂಕಿನ ಹೆಸರಾಂತ ವೈದ್ಯ ಬಡವರ ಪಾಲಿಗೆ ಭಾಗ್ಯದಾತರಾಗಿದ್ದ ಪಟ್ಟಣದ ಜಯರಾಂ ಕ್ಲೀನಿಕ್ ವೈದ್ಯ ಡಾ: ಜೈಯರಾಮ್‌ನಾಯ್ಕ್ (53) ಶುಕ್ರವಾರ ತಮ್ಮ ಜಮೀನಿನ ಕೃಷಿ ಹೊಂಡದಲ್ಲಿ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದು ಧಾರುಣವಾಗಿ ಸಾವನ್ನಪ್ಪಿದ್ದಾರೆ.ವೈದ್ಯ ಡಾ: ಜೈಯರಾಮ್‌ನಾಯ್ಕ್ ಅವರು 1998 ರಲ್ಲಿ ಹೊಸದುರ್ಗ ಪಟ್ಟಣದಲ್ಲಿ ನೂತವಾಗಿ ಕ್ಲೀನಿಕ್ ಪ್ರಾರಂಭಿಸಿದ್ದರು ಅವರ ಸೇವೆ ಇಲ್ಲಿಗೆ ಸರಿ ಸುಮಾರು 27 ವರ್ಷಗಳು ಸಂಧಿವೆ.ಡಾ: ಜೈಯರಾಮ್‌ನಾಯ್ಕ್ ಅವರು ತಾಲೂಕಿನಲ್ಲೆ ಅತ್ಯಂತ ಹೆಸರು ವಾಸಿಯಾದ ವೈದ್ಯರಾಗಿದ್ದು ಬಡವರಿಗೆ ನಿರ್ಗತಿಕರಿಗೆ ದುರ್ಬಲರಿಗೆ ಹಣ ಇಲ್ಲ ಎಂದು ಬಂದವರಿಗೆ ಉಚಿತ ಚಿಕಿತ್ಸೆಯನ್ನ ನೀಡಿ ಸಾಲದೆಂಬಂತೆ ಬಸ್ ಪ್ರಯಾಣದ ಖರ್ಚನ್ನು ಕೂಡ ಕೊಟ್ಟು ಕಳುಹಿಸಿರುವ ಅದೆಷ್ಟೋ ಉದಾಹರಣೆಗಳಿವೆ ಈ ಹಿಂದೆ ಚಿಕನ್‌ಗುನ್ಯಾ ಬಂದಿದ್ದ ಸಂಧರ್ಬದಲ್ಲಿ ಹಣ ಪಡೆದು ಕಾಲು ಭಾಗ ರೋಗಿಗಳಿಗೆ ಚಿಕಿತ್ಸೆ ನೀಡಿದ್ದರೆ, ಉಚಿತವಾಗಿ ಮುಕ್ಕಾಲು ಭಾಗ ಜನರಿಗೆ ಚಿಕಿತ್ಸೆ ನೀಡುವುದರ ಮೂಲಕ ಬಡವರ ಪಾಲಿಗೆ ದೇವರಾಗಿದ್ದರು.

ಡಾ: ಜೈಯರಾಮ್‌ನಾಯ್ಕ್ ಅವರು ನಿತ್ಯವೂ ಕೂಡ ಮುಂಜಾನೆ .7.30 ರ ಸುಮಾರಿಗೆ ತಾಲೂಕಿನ ಕಪ್ಪಗರೆ ಸಮೀಪ ಇದ್ದ ಅವರ ತೋಟಕ್ಕೆ ಹೋಗಿ 9.30 ರ ಸಮಯಕ್ಕೆ ಬಂದು ನಂತರ 10.30 ರ ಸಮಯಕ್ಕೆ ಕ್ಲೀನಿಕ್‌ಗೆ ಹೋಗುವ ಪರಿಪಾಠವನ್ನ ರೂಡಿಸಿಕೊಂಡಿದ್ದರು. ಅದರಂತೆ ಶುಕ್ರವಾರವೂ ಕೂಡ ಮುಂಜಾನೆ ತೋಟಕ್ಕೆ ಹೋದವರು 11 ಗಂಟೆಯದರೂ ಸಹಾ ಮನೆಗೆ ಬಾರದಿದ್ದರಿಂದ ಅವರ ಪತ್ನಿ ಪೋನ್ ಮಾಡಿದರೂ ಸಹಾ ರಿಸೀವ್ ಆಗದೆ ಇದ್ದ ಕಾರಣ ತೋಟಕ್ಕೆ ಹೋಗಿ ನೋಡಿದಾಗ ಡಾ:ಜಯರಾಂ ಅವರು ಕೃಷಿ ಹೊಂಡದ ಓಳಗೆ ಬಿದ್ದಿದ್ದರು, ಈ ಘಟನೆ ಅವರ ತೋಟದಲ್ಲಿರವ ಸಿಸಿ ಕ್ಯಾಮರ ಪುಟೇಜಿನಲ್ಲಿ ಕವರೇಜ್ ಆಗಿದೆ ಎಂದು ಹೇಳಲಾಗಿದ್ದು ಮೃತರಿಗೆ ಪತ್ನಿ,ಓರ್ವ ಪುತ್ರ ಹಾಗೂ ಓರ್ವ ಪುತ್ರಿ ಇದ್ದಾರೆ.

ಜನವೋ ಜನ: ಮದ್ಯಾಹ್ನ 12 ಗಂಟೆಯ ನಂತರ ವಿಷಯ ತಿಳಿಯುತ್ತಿದ್ದಂತೆ ಜನಪ್ರತಿನಿಧಿಗ ತಂಡ ವೈಧ್ಯರ ತಂಡ ಸೇರಿದಂತೆ ಪಟ್ಟಣದ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರು ಸಂಬಂಧಿಗಳು ಆಪ್ತರು ಸೇರಿದಂತೆ ನೂರಾರು ಮಂದಿ ಪಟ್ಟಣದ ಸರ್ಕಾರಿ ಅಸ್ಪತ್ರೆಯ ಮುಂದೆ ಜಮಾಯಿಸಿ ಮಮ್ಮಲ ಮರುಗಿದರು ಸಾಕಷ್ಟು ಮಂದಿ ಕಣ್ಣಿರು ಹಾಕಿ ಅವರ ಆತ್ಮಕ್ಕೆ ಶಾಂತಿ ಕೋರಿದರು.

ಹೊಸದುರ್ಗ ಪಟ್ಟಣದ ಕಪ್ಪಗೆರೆ ರಸ್ತೆಯಲ್ಲಿ ಕಳೆದ ಒಂದು ವರ್ಷದ ಹಿಂದೆಯಷ್ಟೆ ಕಟ್ಟಿಸಿದ್ದ ಹೊಸ ಮನೆಯಲ್ಲಿ ವಾಸವಾಗಿದ್ದರು. ಆಸ್ಪತ್ರೆಯಲ್ಲಿ ಮರಣೋತ್ತರ ಪರೀಷೆ ಮುಗಿದ ನಂತರ ಅವರ ಸ್ವ ಗ್ರಾಮವಾದ ತಾಲೂಕಿನ ಬೀಸನಹಳ್ಳಿಲಂಬಾಣಿಹಟ್ಟಿ ಗ್ರಾಮಕ್ಕೆ ತಗೆದುಕೊಂಡು ಹೋಗಿ ಸಾರ್ವಜನಿಕದ ದರ್ಶನದ ನಂತರ ಸಂಜೆ ವೇಳೆಗೆ ಅವರ ಜಮೀನಿನಲ್ಲಿ ಲಂಬಾಣಿ ಸಂಪ್ರದಾಯದ ಪ್ರಕಾರ ಶವಸಂಸ್ಕಾರ ಮಾಡಲಾಯಿತು.

## ರಾಜ್ಯ ಬಜೆಟ್ 2025–26

# ಭದ್ರಾ ಯೋಜನೆ: ರೂ.2,611 ಕೋಟಿ ಮೊತ್ತದಲ್ಲಿ ಚಿತ್ರದುರ್ಗ ಶಾಖಾ ಕಾಲುವೆ ಪ್ರಸಕ್ತ ವರ್ಷ ಪೂರ್ಣ

» **ಚಿತ್ರದುರ್ಗ**

ಭದ್ರಾ ಮೇಲ್ದಂಡೆ ಯೋಜನೆ ಪೂರ್ಣ ಗೊಳಿಸಲು ರಾಜ್ಯ ಸರ್ಕಾರದಿಂದಲೇ ಅಗತ್ಯ ಅನುದಾನ ಒದಗಿಸುವ ಮೂಲಕ ಪ್ರಸಕ್ತ ಸಾಲಿನಲ್ಲಿಯೇ ರೂ.2,611 ಕೋಟಿ ಅಂದಾಜು ಮೊತ್ತದ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಗಳನ್ನು ಪೂರ್ಣ ಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಶುಕ್ರವಾರದಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 2025–26 ನೇ ಸಾಲಿನ ಬಜೆಟ್‌ನಲ್ಲಿ ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ಭದ್ರಾ ಮೇಲ್ದಂಡೆ ಯೋಜನೆ ಹಾಗೂ ಇತರೆ ಯೋಜನೆಗಳ ಕುರಿತಂತೆ ಪ್ರಸ್ತಾಪಿಸಿದ್ದು, ಭದ್ರಾ ಮೇಲ್ದಂಡೆ ಯೋಜನೆಗೆ 2023–24ರ ಕೇಂದ್ರ ಸರ್ಕಾರದ ಆಯವ್ಯಯದಲ್ಲಿ ಘೋಷಿಸಿದ ರೂ.5,300 ಕೋಟಿ ಅನುದಾನ ಇನ್ನೂ ಬಿಡುಗಡೆಯಾಗಿರುವುದಿಲ್ಲ. ಆದರೂ, ರಾಜ್ಯ ಸರ್ಕಾರವು ಅಗತ್ಯ ಅನುದಾನವನ್ನು ಒದಗಿಸಿ ಈ ಯೋಜನೆಯನ್ನು ಪೂರ್ಣಗೊಳಿಸಲು ಕ್ರಮ ವಹಿಸುತ್ತಿದೆ. ತರೀಕೆರೆ ಏತ ನೀರಾವರಿ ಯೋಜನೆಯಡಿ 79 ಕೆರೆಗಳನ್ನು ತುಂಬಿಸುವ ಮೂಲಕ 49,790 ಎಕರೆ ಸೂಕ್ಷ್ಮ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 2,611 ಕೋಟಿ ರೂ. ಅಂದಾಜು ಮೊತ್ತದ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ಮೂಲಕ ಹೊಸದುರ್ಗ, ಹೊಳಲ್ಕೆರೆ, ಜಗಳೂರು, ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಪಾವಗಡ ತಾಲ್ಲೂಕುಗಳಲ್ಲಿನ 30 ಕೆರೆಗಳನ್ನು ತುಂಬಿಸಿ ಒಂದು ಲಕ್ಷದ ಎಪ್ಪತ್ತೇಳು ಸಾವಿರ ಎಕರೆ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿಗಳು ಶುಕ್ರವಾರ ಮಂಡಿಸಿದ ರಾಜ್ಯ ಬಜೆಟ್‌ನಲ್ಲಿ ತಿಳಿಸಿದ್ದಾರೆ.



ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಪ್ರತಿ ಕ್ವಿಂಟಾಲ್‌ಗೆ ರೂ.7,550 ಜೊತೆಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿ ಪ್ರೋತ್ಸಾಹಧನ ರೂ.450 ಗಳಂತೆ ಒಟ್ಟು ರೂ.138 ಕೋಟಿ ನೀಡಲು ತೀರ್ಮಾನಿಸಲಾಗಿದೆ. ಇದರಿಂದ, ತೊಗರಿ ಬೆಳೆಯುವ ಪ್ರಮುಖ ಜಿಲ್ಲೆಗಳಾದ ಕಲಬುರಗಿ, ಬೀದರ್, ಯಾದಗಿರಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಕೋಲಾರ, ಚಿತ್ರದುರ್ಗ ಹಾಗೂ ಚಿಕ್ಕಬಳ್ಳಾಪುರ ಭಾಗದ ರೈತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಗರ್ಭಿಣಿಯರಲ್ಲಿ ರಕ್ತಹೀನತೆ ತಡೆಗಟ್ಟಲು ಹಿಂದುಳಿದ ಜಿಲ್ಲೆಗಳಲ್ಲಿ ಪೌಷ್ಟಿಕಾಂಶ ಕಿಟ್‌ಗಳು, ಪ್ರೋತ್ಸಾಹ ಧನ ಹಾಗೂ ತಾಯಂದಿರಿಗೆ ವಾತ್ಸಲ್ಯ ಕಿಟ್ ಗಳನ್ನು ವಿತರಣೆ ಮಾಡಲಾಗುವುದು. ಹುದ್ದೆಗಳನ್ನು ಪುನರ್ ಹಂಚಿಕೆ ಮಾಡುವ ಮೂಲಕ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ ಎಂಸಿಹೆಚ್ ತಜ್ಞರನ್ನು ನಿಯೋಜಿಸಲಾಗುವುದು. ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರಿನಲ್ಲಿ 200 ಹಾಸಿಗೆ ಹಾಗೂ ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ 400 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು. ಸುಧಾರಿತ ಆರೋಗ್ಯ ಸೇವೆಯನ್ನು ಒದಗಿಸಲು ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್ ಹಾಗೂ ಚಿತ್ರದುರ್ಗದಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

ಕೋಲಾರ, ರಾಮನಗರ, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹೊಸ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಒಂಭತ್ತು ಕೋಟಿ ರೂ. ಒದಗಿಸಲಾಗಿದೆ.

ರಾಜ್ಯದಲ್ಲಿ ಪ್ರಗತಿಯಲ್ಲಿರುವ 42 ಸ್ವಯಂಚಾಲಿತ ಪರೀಕ್ಷಾ ಪಥಗಳ ನಿರ್ಮಾಣವನ್ನು ಸದರಿ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು. 2025–26ನೇ ಸಾಲಿನಲ್ಲಿ ಹೊನ್ನಾವರ, ಚಾಮರಾಜನಗರ ಮತ್ತು ಚಿತ್ರದುರ್ಗದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ಸ್ವಯಂಚಾಲಿತ ಪರೀಕ್ಷಾ ಪಥಗಳನ್ನು ನಿರ್ಮಿಸಲು ಕ್ರಮವಹಿಸಲಾಗುವುದು. ಈ ಉದ್ದೇಶಕ್ಕಾಗಿ 12 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು. ರಾಜ್ಯದಲ್ಲಿ ವಾಹನ ಸಂಚಾರವನ್ನು ಮೇಲ್ವಿಚಾರಣೆ ಮಾಡಲು ಮತ್ತು ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಪತ್ತೆ ಹಚ್ಚಿ ನಿಯಂತ್ರಿಸಲು ದಾವಣಗೆರೆ, ಧಾರವಾಡ, ಕಲಬುರಗಿ, ಬೆಳಗಾವಿ, ಚಿತ್ರದುರ್ಗ, ಹಾವೇರಿ, ಹೊಸಪೇಟೆ, ಬಳ್ಳಾರಿ, ವಿಜಯಪುರ, ದಕ್ಷಿಣ ಕನ್ನಡ ಜಿಲ್ಲೆಗಳ ಒಟ್ಟು 60 ಸ್ಥಳಗಳಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಎಐ ಆಧಾರಿತ ವಿದ್ಯುನ್ಮಾನ ಕ್ಯಾಮರಾಗಳನ್ನು ಅಳವಡಿಸಲಾಗುವುದು ಎಂದು ಬಜೆಟ್‌ನಲ್ಲಿ ತಿಳಿಸಿದ್ದಾರೆ.

# ಇದು "ಸಾಲದ"ಬಜೆಟ್: ಬಿಜೆಪಿ ಯುವ ಮುಖಂಡರಾದ ಅನಿತ್ ಕುಮಾರ್ ಜೆಎಸ್

» **ಚಿತ್ರದುರ್ಗ**



ದಾಖಲೆಯ 16 ನೇ ಬಜೆಟ್ ಮಂಡಿಸುತ್ತಿರುವ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ರಾಜ್ಯದ ಆರ್ಥಿಕ ಶಿಸ್ತಿನ ದಾಖಲೆಯನ್ನು ಮುರಿದು, ಅತ್ಯಂತ ಹೆಚ್ಚು ಸಾಲ ಮಾಡಿದ ದಾಖಲೆ ಮಾಡಿದ್ದಾರೆ. ಅಲ್ಪಸಂಖ್ಯಾತರ ಓಲೈಕೆ ಈ ಬಜೆಟ್ ನ ಪ್ರಮುಖ ಅಂಶ ರೈತಪರ ಯಾವುದೇ ಹೊಸ. ಯೋಜನೆಗಳಿಲ್ಲದ ನಿರಾಶಾದಾಯಕ ಬಜೆಟ್ ಇದಾಗಿದೆ ಎಂದು ಬಿಜೆಪಿ ಯುವ ಮುಖಂಡರಾದ ಅನಿತ್ ಕುಮಾರ್ ಜಿ ಎಸ್ ತಿಳಿಸಿದ್ದಾರೆ.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಇಂದು ಮಂಡಿಸಿದ ಆಯವ್ಯಯದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು ಸಿಎಂ ಸಿದ್ದರಾಮಯ್ಯ ಅವರು ತಮ್ಮ ಬೋಗಸ್ ಬಜೆಟ್‌ನಲ್ಲಿ ಮುಸ್ಲಿಮರಿಗೆ ಧರ್ಮಾಧಾರಿತ ಮೀಸಲಾತಿಯನ್ನು ನೀಡಿರುವುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯಗಳಿಗೆ ಸಂಪೂರ್ಣ ವಿರುದ್ಧವಾದಂತಹದ್ದು!! ಕಾಂಗ್ರೆಸ್ ಪಕ್ಷಕ್ಕೆ ಬಾಬಾ ಸಾಹೇಬರ ಮೇಲೆ ಎಷ್ಟು ದ್ವೇಷವಿದೆ ಎಂಬುದು ಸಿದ್ದರಾಮಯ್ಯ ಅವರ ಸಂವಿಧಾನ ವಿರೋಧಿ ಬಜೆಟ್ ನಿಂದ ಮತ್ತೊಮ್ಮೆ ಜಗಜ್ಜಾಹೀರಾಗಿದೆ ಎಂದಿದ್ದಾರೆ.

ಈ ಹಿಂದೆ ಬಿಜೆಪಿ ಸರ್ಕಾರ ಘೋಷಣೆ ಮಾಡಿದ ಯಾವುದೇ ಯೋಜನೆಗಳಿಗೆ ಹಣ ಬಿಡುಗಡೆ ಆಗಿಲ್ಲ..ಮತ್ತು ಈ ಬಜೆಟ್‌ನಲ್ಲಿ ಚಿತ್ರದುರ್ಗ ,ದಾವಣಗೆರೆ ಜಿಲ್ಲೆಗೆ ಯಾವುದೇ ಯೋಜನೆ ಘೋಷಣೆ ಮಾಡದೆ ಮಧ್ಯ ಕರ್ನಾಟಕ ಜಿಲ್ಲೆಗಳನ್ನು ಕಡೆಗಣಿಸಿದ್ದಾರೆ ಎಂದು ತಿಳಿಸಿದ್ದಾರೆ.

# ಬಜೆಟ್ ಮೂಲಕ ಜನರ ಮೂಗಿಗೆ ತುಪ್ಪ ಸವರಲು ಹೊರಟ ಸಿಎಂ ಸಿದ್ದು

» **ಚಿತ್ರದುರ್ಗ**



ಹಣಕಾಸು ಖಾತೆಯನ್ನು ಹೊತ್ತ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿರುವಬಜೆಟ್‌ರಾಜ್ಯದಜನತೆಯ ನಿರೀಕ್ಷೆಯನ್ನು ಹುಸಿ ಮಾಡಿದೆ. ನಿಖರ ಭರವಸೆ ನೀಡುವ ಯೋಜನೆ ಹಾಗೂ ಅದಕ್ಕೆ ಅನುದಾನ ಪ್ರಕಟಿಸದೆ ಆಕರ್ಷಕ ಕಾರ್ಯಕ್ರಮಗಳನ್ನು ಘೋಷಿಸಿ, ಜನರ ಮೂಗಿಗೆ ತುಪ್ಪ ಸವರಲು ಹೊರಟಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ ಟೀಕಿಸಿದ್ದಾರೆ.ಬಜಟ್ ಕುರಿತು ಪ್ರತಿಕ್ರಿಯೇ ನೀಡಿರುವ ಅವರು. ಶಿಕ್ಷಣದ ಕ್ಷೇತ್ರದ ಸಮಗ್ರ ಅಭಿವೃದ್ಧಿ ಬಗ್ಗೆ ಯಾವುದೇ ಕೊಡುಗೆ ನೀಡಿಲ್ಲ. ಉದ್ಯೋಗ ಸೃಷ್ಟಿಗೆ ಅವಕಾಶವಿರುವ ಕೈಗಾರಿಕೆಗಳಿಗೆ ಉತ್ತೇಜನವೇ ಇಲ್ಲ ವಿಶೇಷವಾಗಿ ಕೃಷಿ ವಲಯಕ್ಕೆ ಆದ್ಯತೆ ನೀಡುವ ನಿಟ್ಟಿನಲ್ಲಿ ರೈತರ ನಿರೀಕ್ಷೆಗಳನ್ನು ಸಂಪೂರ್ಣವಾಗಿ ಹುಸಿಗೊಳಿಸಿದೆ. ದಿನೇ ದಿನೇ ಗ್ರಾಮೀಣ ಪ್ರದೇಶಗಳಿಂದ ಗುಳೇ ಹೋಗುವ ಪರಿಸ್ಥಿತಿ ಉದ್ಭವಿಸಿರುವ ಹಿನ್ನೆಲೆಯಲ್ಲಿ, ಅದನ್ನು ತಡೆಯುವ ಯಾವುದೇ ಕಾರ್ಯಕ್ರ ಮವನ್ನೂ ಪ್ರಕಟಿಸಿಲ್ಲ. ಹಾಗಾಗಿ ಇದು ಗ್ರಾಮೀಣ ಹಾಗೂ ರೈತ ವಿರೋಧಿ ಬಜೆಟ್ ಎಂದು ತಿಳಿಸಿದ್ದಾರೆ.ಸರ್ಕಾರಿ ಶಾಲೆಗಳ ಕಟ್ಟಡಗಳ ವಿಸ್ತರಣೆ ಹಾಗೂ ನವೀಕರಣಕ್ಕೆ ಬಜೆಟ್‌ನಲ್ಲಿ ಯಾವುದೇ ಹಣ ನೀಡದೇ, ಕೇವಲ 5,000 ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸುವುದಾಗಿ ಘೋಷಿಸಿ ಗುಣಮಟ್ಟದ ಶಿಕ್ಷಣ ಹಾಗೂ ಮೂಲ ಸೌಕರ್ಯದತ್ತ ದೃಷ್ಟಿ ಹರಿಸದೆ ಕೈ ತೊಳೆದುಕೊಳ್ಳಲಾಗಿದೆ. ಸಾಂಸ್ಕೃತಿಕ ವಲಯ ಹಾಗೂ ಪ್ರವಾಸೋದ್ಯಮವನ್ನು ಬಹುವಾಗಿ ವಿಸ್ತರಿಸುವ ನಿರ್ದಿಷ್ಟವಾದ ಯೋಜನೆಗಳನ್ನು ಬಜೆಟ್ ನಲ್ಲಿ ಪ್ರಕಟಿಸದೇ ಈ ಕ್ಷೇತ್ರಗಳ ಬೆಳವಣಿಗೆ ಪೊ?ರೀತ್ಸಾಹ ನೀಡುವ ಪೊಳ್ಳು ಭರವಸೆ ನೀಡಲಾಗಿದೆ ಎಂದು ವಿವರಿಸಿದ್ದಾರೆ.

ಪರಿಶಿಷ್ಟ, ಹಿಂದುಳಿದ ಹಾಗೂ ಅತಿ ಹಿಂದುಳಿದ ಸಮುದಾಯದವರ ಜಪ ಮಾಡಿ ರಾಜಕೀಯವಾಗಿ ಬೆಳೆದು ಬಂದ ಸಿದ್ದರಾಮಯ್ಯನವರು ಈ ಸಮುದಾಯಗಳ ಏಳಿಗೆಗೆ ಯಾವ ಯೋಜನೆಗಳನ್ನೂ ಪ್ರಕಟಿಸಿಲ್ಲ. ವಿವಿಧ ಹಿಂದುಳಿದ ವರ್ಗಗಳ ನಿಗಮಗಳಿಗೆ ಈ ಹಿಂದಿನ ಬಜೆಟ್‌ನಲ್ಲಿ ಘೋಷಣೆಯಾದ ಪೂರ್ಣ ಪ್ರಮಾಣದ ಅನುದಾನವನ್ನೇ ಬಿಡುಗಡೆ ಮಾಡಿಲ್ಲ. ಕುಲಕಸುಬು ಆಧಾರಿತ ಸಮುದಾಯಗಳ ಬದುಕು ರಕ್ಷಿಸಲು ಯಾವುದೇ ಕಾರ್ಯಕ್ರಮಗಳನ್ನು ಕೊಡದೇ ಕೇವಲ ಅಧಿಕಾರಕ್ಕೆ ಬರಲು ಮಾತ್ರ ದಲಿತ, ಹಿಂದುಳಿದವರ ಜಪ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ಅಭಿವೃದ್ಧಿಯಲ್ಲಿ ಹಿಂದುಳಿದ ಸಮುದಾಯಗಳ ಕಷ್ಟದ ತಾಪವನ್ನು ಕಡಿಮೆ ಮಾಡುವ ಯಾವುದೇ ಯೋಜನೆ ಪ್ರಕಟಿಸದೇ ಒಬಿಸಿ ಸಮುದಾಯಗಳ ಹಿತಾಸಕ್ತಿಯನ್ನು ಪೂರ್ಣ ಕಡೆಗಣಿಸಲಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಶಿಕ್ಷಣ ತರಬೇತಿ ಪಡೆದು ಉದ್ಯೋಗಕ್ಕಾಗಿ ಕಾದು ಕುಳಿತಿರುವ ಶಿಕ್ಷಕ ಸಮುದಾಯವನ್ನು ಸಂಪೂರ್ಣ ನಿರಾಸೆಗೊಳಿಸುವ ಮೂಲಕ ಶಿಕ್ಷಣ ಕ್ಷೇತ್ರವನ್ನು ಗಟ್ಟಿಗೊಳಿಸುವಲ್ಲಿ ತನ್ನ ನಿರಾಸಕ್ತಿಯನ್ನು ಮುಖ್ಯಮಂತ್ರಿ ಬಜೆಟ್ ಮೂಲಕ ತೋರಿಸಿದ್ದಾರೆ. ಕೆಳ ಮಧ್ಯಮ ವರ್ಗಗಳ ಅಭ್ಯುದಯ ಕೇಂದ್ರೀಕರಿಸುವ ಯಾವ ಯೋಜನೆಯೂ ಇಲ್ಲ. ವಸತಿ ಸಮಸ್ಯೆ ನೀಗಿಸಲು ಈ ಬಜೆಟ್ ನಲ್ಲಿ ಯಾವುದೇ ಯೋಜನೆ ಪ್ರಕಟಿಸಿಲ್ಲ ದಿರುವುದು ಈ ಸರ್ಕಾರ ಕೇವಲ ಬಡವರ ವಿರೋಧಿ ಅಷ್ಟೇ ಅಲ್ಲ, ಮಧ್ಯಮ ಹಾಗೂ ಕೆಳವರ್ಗಗಳ ವಿರೋಧಿ ಎನ್ನುವುದನ್ನು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ತೋರಿಸಿದ್ದಾರೆ ಎಂದು ಟೀಕಿಸಿದ್ದಾರೆ.ಬಜೆಟ್‌ನಲ್ಲಿ ಘೋಷಿಸಿರುವಯೋಜನೆಗಳುಕೇವಲಕಾಗದದಲ್ಲೇ ಉಳಿಯುವ ಸಾಧ್ಯತೆ ಗೋಚರವಾಗುತ್ತಿದೆ. 'ಹೇಳುವುದು ಒಂದು ಮಾಡುವುದು ಇನ್ನೊಂದು' ಎಂಬಂತೆ ಈ ಬಜೆಟ್ ಆಗಬಾರದು, ಕಳೆದ ಬಜೆಟ್ ನಲ್ಲಿ ಘೋಷಣೆಯಾಗಿದ್ದವೆಲ್ಲವೂ ಘೋಷಣೆಯಾಗಿಯೇ ಉಳಿದಿದೆ, ಈ ಬಜೆಟ್‌ಗೂ ಅದೇ ಗತಿ ಆಗುವ ಸಾಧ್ಯತೆಯೇ ಹೆಚ್ಚು ಎನ್ನುವುದು ರಾಜ್ಯದ ದಯನೀಯ ಆರ್ಥಿಕ ಪರಿಸ್ಥಿತಿ ಹೇಳುತ್ತಿದೆ ಎಂದು ಅವರು ಆಕ್ಷೇಪಿಸಿದ್ದಾರೆ.

ತನ್ನ ತೆರಿಗೆ ಪಾಲನ್ನು ಪಡೆಯುವಲ್ಲಿ ಎಡವಿ ಬಿದ್ದಿರುವ ಕಾಂಗ್ರೆಸ್ ಸರ್ಕಾರ ಹಾಗೂ ಮುಖ್ಯಮಂತ್ರಿಗಳು ಬಜೆಟ್ ನಲ್ಲಿ ಕೇಂದ್ರ ಸರ್ಕಾರದ ಮೇಲೆ ಆರೋಪ ಹೊರಿಸುವ ಅಂಶಗಳನ್ನು ಸೇರಿಸಿಕೊಂಡು ರಾಜ್ಯದ ಆರ್ಥಿಕ ಸ್ಥಿತಿಯ ನಿರ್ವಹಣೆಯ ವೈಫಲ್ಯವನ್ನು ಮುಚ್ಚಿಕೊಳ್ಳಲು ಹೊರಟಿದ್ದಾರೆ.


ಪುಟ 2


## ಪ್ರಮುಖ ಸುದ್ದಿ

# ರಂಜಾನ್ ಹಬ್ಬ: ಚಳ್ಳಕೆರೆ ಈದ್ಗಾ ಮೈದಾನದ ಇಫ್ತಿಯಾರ್‌ಕೂಟದಲ್ಲಿ ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಬೆಂಗಳೂರು ರಸ್ತೆಯ ಈದ್ಗಾ ಮೈದಾನದಲ್ಲಿ ಉಪವಾಸ ವ್ರತವನ್ನು ಕೈಗೊಂಡ ಮುಸ್ಲಿಂ ಬಂಧುಗಳಿಗೆ ಇಫ್ತಿಯಾರ್‌ಕೂಟವನ್ನು ಏರ್ಪಡಿಸಿದ್ದು, ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಭೇಟಿ ನೀಡಿ ಮುಸ್ಲಿಂ ಬಂಧುಗಳಿಗೆ ರಂಜಾನ್ ಹಬ್ಬದ ಶುಭಾಶಯಗಳನ್ನು ತಿಳಿಸಿದರು.

ಪ್ರತಿವರ್ಷವೂ ಇಲ್ಲಿನ ಮುಸ್ಲಿಂ ಬಂಧುಗಳು ರಂಜಾನ್‌ಪ್ರಯುಕ್ತ ಉಪವಾಸ ವ್ರತವನ್ನು ಕೈಗೊಂಡು ನಾಡಿನ ಕಲ್ಯಾಣಕ್ಕಾಗಿ ಅಲ್ಲಾನನ್ನು ಪ್ರಾರ್ಥಿಸುತ್ತಾರೆ. ಕಳೆದ ಸುಮಾರು 15 ವರ್ಷಗಳಿಂದ ನಾನು



ಸಹ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಅವಕಾಶವನ್ನು ಮುಸ್ಲಿಂ ಬಂಧುಗಳು ಕಲ್ಪಿಸಿದ್ಧಾರೆ. ಎಲ್ಲರೂ ಪರಸ್ಪರ ಪ್ರೀತಿ, ವಿಶ್ವಾಸ, ಗೌರವದಿಂದ ಇರಬೇಕಾಗಿದೆ. ಇಲ್ಲಿನ ಯಾವುದೇ ಸಮಸ್ಯೆಗಳಿಗೆ ಸಕರಾತ್ಮಕವಾಗಿ ಸ್ಪಂದಿಸುವ ಭರವಸೆ ನೀಡಿದರು. ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ,ಎಂ.ಜೆ.ರಾಘವೇಂದ್ರ, ನಾಮನಿರ್ದೇಶಕರಾದ ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ವೀರಭದ್ರಪ್ಪ, ಮುಖಂಡರಾದ ಎಚ್.ಎಸ್.ಸೈಯದ್, ಬಿ.ಫರೀದ್‌ಖಾನ್,ಮುಜೀಬುಲ್ಲಾ,ಶಶಿಧರ, ಎಂ.ಚೇತನ್‌ಕುಮಾರ್, ತಿಪ್ಪೇಸ್ವಾಮಿ, ರಾಜಣ್ಣ, ರುದ್ರಮುನಿ, ಭರಮಯ್ಯ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬಜೆಟ್ ಮೂಲಕ ಜನರ ಮೂಗಿಗೆ ತುಪ್ಪ ಸವರಲು ಹೊರಟ ಸಿಎಂ ಸಿದ್ದು

» ಮೊದಲ ಪುಟದಿಂದ

ಕೃಷಿಕರು, ಕಾರ್ಮಿಕರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಎನ್‌ಎಚ್‌ಎಂ ನೌಕರರು ಸೇರಿದಂತೆ ಶ್ರಮಿಕ ವರ್ಗಗಳನ್ನು ಕಡೆಗಣಿಸಿ ಅಧಿಕಾರಕ್ಕೆ ಬರುವ ಮುನ್ನ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿದ್ದ ಯಾವುದೇ ಅಂಶಗಳನ್ನು ಬಜೆಟ್‌ನಲ್ಲಿ ಕಾರ್ಯಗತಗೊಳಿಸಲು ಯಾವುದೇ ಹೊಸ ಭರವಸೆಯ ಹೆಜ್ಜೆ ಇಡದೇ ಕೊಟ್ಟ ಮಾತು ತಪ್ಪಿದ ಜನ ವಿರೋಧಿ ಬಜೆಟ್ ಸಿದ್ದರಾಮಯ್ಯನವರು ಮಂಡಿಸಿದ್ದಾರೆ ಎಂದಿದ್ದಾರೆ. ತಾವು ಘೋಷಿಸಿರುವ ಹೊಸ ಕಾರ್ಯಕ್ರಮಗಳಿಗೆ ಹಾಗೂ ಹದಗೆಟ್ಟಿರುವ ಆರ್ಥಿಕ ಪರಿಸ್ಥಿತಿಯನ್ನು ನಿರ್ವಹಿಸುವ ನಿಟ್ಟಿನಲ್ಲಿ ಜನರಿಗೆ ಹೊರೆಯಾಗದ ರೀತಿಯಲ್ಲಿ ಸಂಪನ್ಮೂಲ ಕ್ರೋಡೀಕರಣದ ಮೂಲಗಳನ್ನು ಸ್ಪಷ್ಟವಾಗಿ ಎಲ್ಲಿಯೂ ವಿವರಿಸಿಲ್ಲ, ಆ ಮೂಲಕ ಇದೊಂದು ತೋರಿಕೆಯ ಹಾಗೂ ಜನರ ಕಿವಿಗೆ ಹೂ ಮುಡಿಸುವ ಬಜೆಟ್ ಆಗಿದೆ ಎಂಬುದು ಸ್ಪಷ್ಟವಾಗಿ ಗೋಚರಿಸುತ್ತದೆ ಎಂದು ಹೇಳಿದ್ದಾರೆ.

### ಮಾ.13ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಇದೇ ಮಾರ್ಚ್ 13ರಂದು ಬೆಳಿಗ್ಗೆ 10 ರಿಂದ 3 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ ಪಿಎಸ್‌ಐ ಅವೆ ಟೆಕ್ ಬೆಂಗಳೂರು ಹಾಗೂ ಮುಂತಾದ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಟ್ರೈನಿ ಮುಂತಾದ ಹುದ್ದೆಗಳಿಗೆ ಕಾರ್ಯನಿರ್ವಹಿಸಲು ಪುರುಷ ಮತ್ತು ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳುವ ಸಂಬಂಧ ಭಾಗವಹಿಸಲಿವೆ. ಬಿಇ, ಬಿಟೆಕ್ ಹಾಗೂ ಡಿಪ್ಲೊಮಾ, ಐಟಿಐ, ಎಲೆಕ್ಟ್ರೀಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿದ್ಯಾರ್ಹತೆ ಹೊಂದಿರುವ 100 ಟ್ರೈನಿ ಇಂಜಿನಿಯರ್ ಹಾಗೂ 100 ಜೂನಿಯರ್ ಟ್ರೈನಿ ಇಂಜಿನಿಯರ್ ಹುದ್ದೆಗಳು ಖಾಲಿ ಇದ್ದು, ಬೆಂಗಳೂರಿನಲ್ಲಿ ಕೆಲಸ ನಿರ್ವಹಿಸಬೇಕಾಗಿದೆ. ಟ್ರೈನಿ ಇಂಜಿನಿಯರ್ ಹುದ್ದೆಗೆ ಮಾಸಿಕ 18 ಸಾವಿರ ವೇತನ ನಿಗಧಿಪಡಿಸಿದ್ದು, ಜೂನಿಯರ್ ಟ್ರೈನಿ ಇಂಜಿನಿಯರ್‌ಗೆ ಮಾಸಿಕ 16 ಸಾವಿರ ನಿಗಧಿಪಡಿಸಲಾಗಿದೆ. ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ ಬಯೋಡಾಟಾ ಪ್ರತಿಗಳು, ಫೋಟೋಸ್, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರ, ಸ್ಟೇಡಿಯಂ ತಿರುವು, ಉದ್ಯೋಗ ವಿನಿಮಯ ಕೇಂದ್ರ ಕಚೇರಿ, ಚಿತ್ರದುರ್ಗ ದೂರವಾಣಿ ಸಂಖ್ಯೆ 7022459064, 8105619020 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಡಿ.ರವೀಂದ್ರ ತಿಳಿಸಿದ್ದಾರೆ.

### ಮಾ.9 ರಿಂದ 16 ರವರೆಗೆ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ಸಿರಿಗೆರೆ ಶಾಖಾ ವ್ಯಾಪ್ತಿಗೆ ಒಳಪಡುವ Improvements to Sirigere to Bommenahalli via Kadleguddu 15Km in Chitradurga Taluk of Chitradurga Distrcit-CC Road (proposed Ch 0.00 to 13.50 Km) (Working chainage 2.42 to 11.42 Km) (W.I.31) ಕಾಮಗಾರಿಯು ಚಿಕ್ಕೇನಹಳ್ಳಿಯಿಂದ ಕೋಣನೂರು ಗ್ರಾಮದವರೆಗೆ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸುವ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಇದೇ ಮಾರ್ಚ್ 09 ರಿಂದ 16 ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಸಿರಿಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎನ್.ಜೆ.ವೈ ಮತ್ತು ಐ.ಪಿ. ಮಾರ್ಗಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯ ಪ್ರದೇಶಗಳು: 66/11 ಕೆವಿ ಸಿರಿಗೆರೆ ವಿವಿ ಕೇಂದ್ರದಿಂದ ಸರಬರಾಜಾಗುವ 11ಕೆವಿ ಮಾರ್ಗಗಳಲ್ಲಿ ವಿದ್ಯುತ್ ಅಡಚಣೆಯಾಗುತ್ತದೆ. ಸಿರಿಗೆರೆ, ಕೋಣನೂರು, ಚಿಕ್ಕೇನಹಳ್ಳಿ, ಆಲಗಟ್ಟ, ಬೊಮ್ಮವ್ವನಾಗತಿಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಐ.ಪಿ. ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ತರಬೇತಿ

» ದಾವಣಗೆರೆ

ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಧುನಿಕ ಹೈನುಗಾರಿಕೆ ತರಬೇತಿಯನ್ನು ಮಾರ್ಚ್ 10 ಮತ್ತು 11 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

# ಜಲಜೀವನ್ ಮಿಷನ್; ಅನುಷ್ಠಾನ, ಕಾರ್ಯಾಚರಣೆ, ನಿರ್ವಹಣೆ ಜವಾಬ್ದಾರಿಯುತವಾಗಿರಲಿ: ಪಾಟೀಲ್

» ಚಿತ್ರದುರ್ಗ





ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು ಮತ್ತು ಇಲಾಖೆಯವರು ಒಟ್ಟಾಗಿ ಪಂಚಾಯಿತಿ ಮಟ್ಟದಲ್ಲಿ ಜಲ ಜೀವನ್ ಮಿಷನ್ ಅನುಷ್ಠಾನ ಮತ್ತು ಕಾರ್ಯಚರಣೆ, ನಿರ್ವಹಣೆ ಜವಾಬ್ದಾಯುತವಾಗಿ ಮಾಡಬೇಕು ಎಂದು ಗ್ರಾಮೀಣ ಕುಡಿಯುಬ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಈಚೆಗೆ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಜಲ ಜೀವನ್ ಮಿಷನ್ ಮತ್ತು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳನ್ನು ಉತ್ತಮ ಅನುಷ್ಠಾನಕ್ಕಾಗಿ ವಾಶ್ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಗಳಿಗೆ ಸಾಮರ್ಥ್ಯ ಅಭಿವೃದ್ಧಿಗೊಳಿಸುವ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಗಳನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಮಾಡಿ ಅದರ ನಡಾವಳಿಯನ್ನು ಜಿಲ್ಲಾ ಪಂಚಾಯಿತಿ ಕಛೇರಿಗೆ ಸಲ್ಲಿಸಬೇಕು. ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ 24*7 ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಜಿ.ಪಂ ಮುಖ್ಯ ಯೋಜನಾಧಿಕಾರಿ ಸಿ ಎನ್ ಗಾಯಿತ್ರಿ ಮಾತನಾಡಿ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಪುನರ್ ರಚನೆ ಮತ್ತು ಖಾತೆಗಳನ್ನು ತೆರೆಯುವುದು ಮತ್ತು ತಾಂತ್ರಿಕ ಕೌಶಲ್ಯಗಳನ್ನು ಉಪಯೋಗಿಸಿಕೊಂಡು ಐಇಸಿ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಗ್ರಾಮೀಣ ಸಮುದಾಯದಲ್ಲಿ ವ್ಯಾಪಕವಾದ ಅರಿವು ಮೂಡಿಸಬೇಕಾಗಿದೆ ಎಂದು ಹೇಳಿದರು.

ಪ್ರತಿ ಮನೆ-ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ ಈ ನಿಟ್ಟಿನಲ್ಲಿ ಎಲ್ಲಾ ಕಡೆಯಲ್ಲೂ ಒವರ್ ಹೆಡ್ ಟ್ಯಾಂಕ್‌ಗಳ ಗಳ ನಿರ್ಮಾಣ ಸೇರಿದಂತೆ ಜಲ ಜೀವನ್ ಮಿಷನ್ ನಿಂದ ಅಗತ್ಯ ಸಿದ್ದತೆ ಕೈಗೊಳ್ಳಲಾಗಿದ್ದು, ಪೂರ್ಣಗೊಂಡ ಕಾಮಗಾರಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಬೇಕು ಬಳಿಕ ನಿರ್ವಹಣೆ ಮಾಡಲು ಅಗತ್ಯ ಕೈಗೊಳ್ಳಬೇಕೆಂದು ತಿಳಿಸಿದರು.

ರಾಜ್ಯ ಸಂಪನ್ಮೂಲ ವ್ಯಕ್ತಿಯಾದ ಜೋಸೆಫ್ ಜಿ.ಎಂ ರೆಬೆಲ್ಲೋ ಅವರು ವಿಡಬ್ಲ್ಯೂಎಸ್‌ಸಿ ಸಮಿತಿ, ಜಲ ಮೂಲಗಳ ಸಂರಕ್ಷಣೆ, ಘನ ದ್ರವ ತ್ಯಾಜ್ಯಗಳ ನಿರ್ವಹಣೆ, ಕಾರ್ಯಚರಣೆ, ಶೌಚಾಲಯದ ಮಹತ್ವ, ನೀರಿನ ಮಹತ್ವ, ಶುಚಿತ್ವ ಬೂದು ನೀರು ನಿರ್ವಹಣೆ ಮಳೆ ನೀರು ಕೊಯ್ಲು ಜಲ ಸಂಪನ್ಮೂಲ ಮತ್ತು ಜಲ ಕ್ಷಾಮ ನೀರಿನ ಶುದ್ಧತೆ ಮತ್ತು ನೀರಿನ ಮಲಿನತೆ ನೀರಿನ ದುರ್ಬಳಕೆ ಮತ್ತು ಸದ್ಬಳಕೆ ಬಾವಿ ಕೆರೆ ನದಿ ಮತ್ತು ಕೊಳವೆ ಬಾವಿ ನೀರಿನ ವ್ಯತ್ಯಾಸ. ಜಲ ಸಂರಕ್ಷಣಾ ವಿಧಾನಗಳು ಮತ್ತು ಪ್ರಾಮುಖ್ಯತೆ. ಬೂದು ನೀರು ಮತ್ತು ಕಪ್ಪು ನೀರು ಸಮಸ್ಯೆ ಮತ್ತು ಪರಿಹಾರ ನೀರಿನ ಸುಸ್ಥಿರತೆ ಕಾಪಾಡುವಲ್ಲಿ ಸಮುದಾಯ ಸಹಬಾಗಿತ್ವ ಮಳೆ ನೀರು ಕೊಯ್ಲು ವೈಜ್ಞಾನಿಕ ರಚನೆ ಮತ್ತು ನಿರ್ವಹಣೆ ಮುಂತಾದ ವಿಷಯಗಳ ಬಗ್ಗೆ ಮಾಹಿತಿ ನೀಡಿದರು.

ತರಬೇತಿಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ದಯಾನಂದಸ್ವಾಮಿ, ಲಿಂಗರಾಜು, ಕಿರಿಯ ಅಭಿಯಂತರರಾದ ಕಾರ್ತಿಕ್, ಭಾರತಿ, ತಿಪ್ಪೇಸ್ವಾಮಿ, ಎಎಒ ಜಿಲ್ಲಾ ವ್ಯವಸ್ಥಾಪಕರಾದ ಮುಂಜುನಾರ್ ನಾಡರ್, ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಜಿಲ್ಲಾ ಸಮಾಲೋಚಕರಾದ ಬಿ.ಸಿ. ನಾಗರಾಜ್, ವಿನಯ್ ಕುಮಾರ್, ಶಶಿಧರ್ ಮತ್ತು ಪ್ರಮೀಳ, ಲೆಕ್ಕ ಸಹಾಯಕರಾದ ಶೃತಿ. ಬಿ.ಜೆ ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಸಮಾಲೋಚಕ, ಕಿರಣ್ ಪಾಟೀಲ್, ಚಂದ್ರಕಾಂತ್, ಯಲ್ಲಪ್ಪ, ಗೀತಾಲಕ್ಷ್ಮೀ ಇದ್ದರು.

**ಮೆದುಳು ಜ್ವರ ಕುರಿತು ಸಾರ್ವಜನಿಕ ಸಮರ್ಥನಾ ಸಭೆಯಲ್ಲಿ ಜಿಲ್ಲಾ ಕೀಟಶಾಸ್ತ್ರಜ್ಞೆ ಕಡಿ**

# ರೋಗ ನಿಯಂತ್ರಣಕ್ಕೆ ವಿವಿಧ ಇಲಾಖೆಗಳ ಕೈಜೋಡಿಸಬೇಕು: ಡಾ.ನಂದಿನಿ

» ಚಿತ್ರದುರ್ಗ

ಮೆದುಳು ಜ್ವರ ಮಾರಕ ರೋಗವಾಗಿದ್ದು, ಇದು 15 ವರ್ಷದೊಳಗಿನ ಮಕ್ಕಳನ್ನು ಹೆಚ್ಚಾಗಿ ಕಾಡುತ್ತದೆ. ಈ ಕುರಿತು ಮುನ್ನೆಚ್ಚರಿಕೆ ಅಗತ್ಯ ಎಂದು ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ ಹೇಳಿದರು.

ಚಳ್ಳಕೆರೆ ತಾಲ್ಲೂಕಿನ ಬೇಡರೆಡ್ಡಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಬಂಡೆ ತಿಮ್ಮಾಪುರ ಗ್ರಾಮದಲ್ಲಿ ಶುಕ್ರವಾರ ಆರೋಗ್ಯ ಇಲಾಖೆಯ ಮೆದುಳು ಜ್ವರ ಕುರಿತು ಸಾರ್ವಜನಿಕ ಸಮರ್ಥನಾ ಸಭೆಯಲ್ಲಿ ಅವರು ಮಾತನಾಡಿದರು.



ಮೆದುಳು ಜ್ವರದ ವೈರಾಣು ಹೊಂದಿದ ಹಂದಿ ಮತ್ತು ಬೆಳ್ಳಕ್ಕಿಯನ್ನು ಕಚ್ಚಿದ ಕ್ಯೂಲೆಕ್ಸ್ ಜಾತಿ ಸೊಳ್ಳೆಗಳು ಮನುಷ್ಯರಿಗೆ ಕಚ್ಚುವುದರಿಂದ ಈ ರೋಗ ಹರಡುತ್ತದೆ. ಸೆಪ್ಟೆಂಬರ್‌ನಿಂದ ಡಿಸೆಂಬರ್ ಮಾಹೆಯವರೆಗೆ ಈ ರೋಗ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ಈ ರೋಗ ತಡೆಗಟ್ಟಲು ಆರೋಗ್ಯ ಇಲಾಖೆ ಹಲವಾರು ಕ್ರಮ ಕೈಗೊಂಡಿದೆ. ಈ ಕುರಿತು ಜನರಲ್ಲಿ ಅರಿವು ಮೂಡಿಸಲು ವಿವಿಧ ಇಲಾಖೆ ಅಧಿಕಾರಿಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಜ್ವರ, ತಲೆನೋವು, ಕತ್ತಿನ ಬಿಗಿತ, ತಲೆ ಸುತ್ತುವಿಕೆ, ಮೈ ನಡುಕ, ಎಚ್ಚರ ತಪ್ಪುವುದು, ಮೆದುಳು ಜ್ವರದ ಲಕ್ಷಣಗಳಾಗಿದ್ದು, ಖಾಯಿಲೆಯು ಉಲ್ಬಣಗೊಂಡಾಗ ಮೆದುಳು ಊತಗೊಂಡು ಸಾವು ಸಂಭವಿಸಬಹುದು. ಆದ್ದರಿಂದ ಮುನ್ನೆಚ್ಚರಿಕೆ ಕ್ರಮಗಳಾಗಿ ಮಕ್ಕಳಿಗೆ ಮೆದುಳು ಜ್ವರ ವಿರುದ್ಧದ ಲಸಿಕೆ ಕೊಡಿಸುವುದು, ಹಂದಿಗಳನ್ನು ಜನರ ವಾಸಸ್ಥಳದಿಂದ ಕನಿಷ್ಟ ಪಕ್ಷ 3 ಕಿ.ಮೀ ದೂರಕ್ಕೆ ಸ್ಥಳಾಂತರಿಸುವುದು, ಸಂಜೆ ವೇಳೆಯಲ್ಲಿ ಮೈ ತುಂಬಾ ಬಟ್ಟೆ ಧರಿಸಿ ಓಡಾಡುವುದು, ಹಂದಿ ಗೂಡುಗಳಿಗೆ ಸೊಳ್ಳೆ ನಿರೋಧಕ ಜಾಲರಿ ಅಳವಡಿಸುವುದು ಮತ್ತು ಕೀಟ ನಾಶಕ ಸಿಂಪಡಿಸುವುದು, ರೋಗ ಲಕ್ಷಣ ಕಂಡು ಬಂದ ತಕ್ಷಣ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಸೂಕ್ತ ಚಿಕಿತ್ಸೆ ನೀಡಬೇಕು ಎಂದರು. ಸಭೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಲೋಕೇಶ್, ಬಸವರಾಜು, ಸಮುದಾಯ ಆರೋಗ್ಯ ಅಧಿಕಾರಿ ನಾಗರಾಜ್, ಗ್ರಾಮ ಪಂಚಾಯಿತಿ ಸದಸ್ಯರಾದ ಬೊಮ್ಮಣ್ಣ, ಪಶು ವೈದ್ಯಕೀಯ ಇಲಾಖೆಯ ಸಿಬ್ಬಂದಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದ್ದರು.

### ಬಾಲಕರ ಶಾಲೆಯ ವಿದ್ಯಾರ್ಥಿಗಳಿಗೆ ಹಿಮೋಗ್ಲೋಬಿನ್ ಪರೀಕ್ಷೆ



» ಪರಶುರಾಂಪುರ

ಗ್ರಾಮದ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರೋಗ್ಯ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ರಕ್ತದಲ್ಲಿರುವ ಹಿಮೋಗ್ಲೋಬಿನ್ ಪರೀಕ್ಷೆ ನಡೆಸಿದರು.ಈ ವೇಳೆಯಲ್ಲಿ ಮುಖ್ಯ ಶಿಕ್ಷಕಿ ಭೂತಮ್ಮ ಮಾತನಾಡಿ, ವಿದ್ಯಾರ್ಥಿಗಳ ಆರೋಗ್ಯ ದೃಷ್ಟಿಯಿಂದ ಇಲಾಖೆಯ ವತಿಯಿಂದ ಹಾಲು, ಮೊಟ್ಟೆ, ಬಿಸಿಯೂಟ ಸೇರಿದಂತೆ ಸಾಕಷ್ಟು ಯೋಜನೆಗಳನ್ನ ನೀಡಿದೆ ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.ಸಿಎಚ್‌ಓ ನರಸಿಂಹಮೂರ್ತಿ ಮಾತನಾಡಿ, ಪ್ರಸ್ತುತ ಮಕ್ಕಳಲ್ಲಿ ಹಿಮೋಗ್ಲೋಬಿನ್ ಎಷ್ಟಿದೆ ಎಂಬುದನ್ನು ಪರೀಕ್ಷೆ ಮಾಡಲಾಗಿದೆ. ವಿದ್ಯಾರ್ಥಿಗಳು ಸೊಪ್ಪು, ತರಕಾರಿ ಸೇವಿಸುವುದರಿಂದ ರಕ್ತಹೀನತೆ ಉಂಟಾಗುವುದಿಲ್ಲ. ಇದಕ್ಕಾಗಿ ಇಲಾಖೆಗಳ ಸಹಯೋಗದ ಯೋಜನೆಗಳ ಸದುಪಯೋಗ ಪಡಿಯಿರಿ ಎಂದರು.ಈ ವೇಳೆಯಲ್ಲಿ ಮುಖ್ಯ ಶಿಕ್ಷಕಿ ಭೂತಮ್ಮ, ಸಿಎಚ್‌ಓ ನರಸಿಂಹಮೂರ್ತಿ, ಶಿಕ್ಷಕರಾದ ಚಂದ್ರಶೇಖರ್, ವಿರೇಂದ್ರ, ಹರೀಶ್ ನಾಯ್ಕ, ಪುಷ್ಪಾವತಿ, ಲತಾ, ಜ್ಯೆ ಸುಧಾ, ವಸಂತಮ್ಮ, ಹಾಲಮ್ಮ, ಹರ ಸುರೇಶ್ ಆಶಾ ಕಾರ್ಯಕರ್ತರು ಸೇರಿದಂತೆ ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಮಹಾಲಕ್ಷ್ಮಿ ದೇವಸ್ಥಾನ ಪ್ರತಿಷ್ಠಾಪನಾ ಮಹೋತ್ಸವ



**ಚಳ್ಳಕೆರೆ:** ಶಿವನಗರ ಬಡಾವಣೆಯಲ್ಲಿ ಮಹಾಲಕ್ಷ್ಮಿ ದೇವಸ್ಥಾನ ಸೇವಾ ಸಮಿತಿ ಹಮ್ಮಿಕೊಂಡಿರುವ ಪ್ರತಿಷ್ಠಾಪನಾ ಮಹೋತ್ಸವ ಶುಕ್ರವಾರದಿಂದ ಆರಂಭವಾಗಿದ್ದು, ಸಂಜೆ 5.30ರ ಗೋಧೂಳಿ ಲಗ್ನದಲ್ಲಿ ಸುವಾಸನಿಯರಿಂದ ಗಂಗಾಪೂಜೆ ಮತ್ತು ನೂತನ ಶೀಲಾಮೂರ್ತಿಗಳಿಗೆ ಗಂಗಾಸ್ನಾನ, ಪಂಚಗವ್ಯಸ್ನಾನ, ನೇತ್ರಬಂಧನ ನೆರವೇರಿಸಿ ಮಂಗಳವಾದ್ಯಗಳೊಂದಿಗೆ ಆಲಯ ಪ್ರವೇಶವನ್ನು ದೀಪಾರಾಧನೆಯೊಂದಿಗೆ ಮಾಡಲಾಯಿತು. ನಂತರ ಆರ್ಚಕರು ಪೂಜಾ ಕಾರ್ಯಕ್ರಮಗಳನ್ನು ನಡೆಸಿದರು, ಇದೇ ಸಂದರ್ಭದಲ್ಲಿ ಶಿವನಗರದ ಮಹಿಳಾ ಸಂಘದಿಂದ ಭಜನೆ ಹಾಗೂ ಮಕ್ಕಳಿಂದ ಭಗವದ್ಗೀತೆ ಪಠಣೆ ನಡೆಯಿತು. ಮೂರುದಿನಗಳ ಕಾಲ ನಡೆಯುವ ಪ್ರತಿಷ್ಠಾಪನಾ ಮಹೋತ್ಸವಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸುವಂತೆ ವ್ಯವಸ್ಥಾಪಕರು ಮನವಿ ಮಾಡಿದ್ದಾರೆ. ಸಮಿತಿ ಗೌರವಾಧ್ಯಕ್ಷ ಟಿ.ಪ್ರಭುದೇವ, ಅಧ್ಯಕ್ಷ ಎಚ್.ಎಸ್.ನಾಗರಾಜು, ಸಂಚಾಲಕ ಬಿ.ಸಿ.ಸಂಜೀವಮೂರ್ತಿ, ಉಪಾಧ್ಯಕ್ಷ ಎ.ವಿಜಯೇಂದ್ರ,ಟಿ.ಆರ್.ಪಾಂಡುರಂಗ, ಕಾರ್ಯದರ್ಶಿ ಎ.ಎಸ್.ಕುಮಾರ್, ಸಹ ಕಾರ್ಯದರ್ಶಿ ಸುಮನಕೋಟೇಶ್ವರ್ ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ವಿವಿಧ ಬ್ಯಾಂಕ್‌ಗಳಿಗೆ ತೆರಳಿ ಪೊಲೀಸರಿಂದ ಜಾಗೃತಿ: ಹಣ ಪಡೆದ ಸಮಯದಲ್ಲಿ ಎಚ್ಚರಿಕೆಯಿಂದ ಇರುವಂತೆ ಸೂಚನೆ

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ನಗರದಲ್ಲಿರುವ ವಾಣಿಜ್ಯಬ್ಯಾಂಕ್‌ಗಳಿಂದ ಹಣ ಪಡೆದ ಗ್ರಾಹಕರು ಮನೆಗೆ ಹೋಗುವ ಮುನ್ನ ವಾಹನ ನಿಲ್ಲಿಸಿ ಬೇರೆ ಕೆಲಸದಲ್ಲಿ ನಿರತರಾದಾಗ ದ್ವಿಚಕ್ರವಾಹನದ ಬಾಕ್ಸ್ ಒಡೆದು ಹಣ ದೋಚುವ ಪ್ರಕರಣಗಳು ನಿರಂತರ ವರದಿಯಾಗುತ್ತಿರುವ ಹಿನ್ನಲೆಯಲ್ಲಿ ನಗರ ವಿವಿಧ ಬ್ಯಾಂಕ್‌ಗಳಿಗೆ ತೆರಳಿ ಪೊಲೀಸ ಇಲಾಖೆಯಿಂದ ಜಾಗೃತಿ ಮೂಡಿಸಲಾಯಿತು.



ಜಿಲ್ಲಾ ರಕ್ಷಣಾಧಿಕಾರಿಗಳು ಹಾಗೂ ಉಪವಿಭಾಗದ ಡಿವೈಎಸ್ಪಿ ಮಾರ್ಗದರ್ಶನದಲ್ಲಿ ಪಿಎಸ್‌ಐ ಜೆ.ಶಿವರಾಜ್ ಮತ್ತು ಸಿಬ್ಬಂದಿ ವರ್ಗ ಬೆಂಗಳೂರು, ಬಳ್ಳಾರಿ, ಚಿತ್ರದುರ್ಗ, ಪಾವಗಡ ರಸ್ತೆಯಲ್ಲಿರುವ ಬ್ಯಾಂಕ್‌ಗಳಿಗೆ ತೆರಳಿ ಅಲ್ಲಿರುವ ಗ್ರಾಹಕರಿಗೆ ಹಣ ಪಡೆದ ನಂತರ ನಿಮ್ಮ ವಾಹನಗಳಲ್ಲಿ ಹಣವನ್ನು ಭದ್ರವಾಗಿಟ್ಟುಕೊಂಡು ಮನೆಗೆ ಹೋಗಿ ಹಣ ರಕ್ಷಿಸಿಕೊಳ್ಳಿ, ಬ್ಯಾಂಕ್‌ನಲ್ಲಿರುವಾಗಲೇ ಹಣವನ್ನು ಕೌಂಟರ್ ಬಳಿಯೇ ಏಣಿಕೆ ಮಾಡಿಕೊಳ್ಳಿ, ನಿಮ್ಮ ಸುತ್ತಮುತ್ತಲು ಅನುಮಾನಸ್ಪಂದ ವ್ಯಕ್ತಿಗಳು ಕಂಡಲ್ಲಿ ಕೂಡಲೇ ಜಾಗೃತರಾಗಿ. ನಿಮಗೆ ಪರಿಚಿತರು, ಸ್ನೇಹಿತರು ಅಥವಾ ಬಂಧುಗಳೊಂದಿಗೆ ಬ್ಯಾಂಕ್‌ಗೆ ತೆರಳುವುದು ಉತ್ತಮ, ಬ್ಯಾಂಕ್ ಹೋಗುವ ಮುನ್ನ, ಬರುವ ಮುನ್ನ ನಿಮ್ಮೆಲ್ಲಾ ದೃಷ್ಠಿ ನೀವು ಡ್ರಾಮಾಡಿದ ಹಣದ ಮೇಲಿರಲಿ. ಯಾವುದೇ ಕಾರಣಕ್ಕೂ ಯಾರೊಂದಿಗೂ ಅನಗತ್ಯ ಮಾತನಾಡದೆ ನಿಮ್ಮ ಹಣವನ್ನು ಜವಾಬ್ದಾರಿಯುತವಾಗಿ ನಿಮ್ಮ ಮನೆಗೆ ಅಥವಾ ಕಾರ್ಯಕ್ಕೆ ತೆಗೆದುಕೊಂಡು ಹೋಗಿ. ಬೇರೆ ಬ್ಯಾಂಕ್‌ಗೆ ಪಾವತಿಸಬೇಕಾದಲ್ಲಿ ಎಲ್ಲಾ ಹಂತದಲ್ಲೂ ಜಾಗ್ರತೆ ವಹಿಸಬೇಕು ಎಂದರು.

ಬ್ಯಾಂಕ್‌ನಲ್ಲಿದ್ದ ಮಹಿಳಾ ಗ್ರಾಹಕರಿಗೂ ಮಾಹಿತಿ ನೀಡಿ, ಇತ್ತೀಚೆಗೆ ಸರಗಳ್ಳತನ ಹೆಚ್ಚುತ್ತಿದ್ದು, ಮಹಿಳೆಯರೂ ಸಹ ರಸ್ತೆ ಬದಿ ಓಡಾಡುವಾಗ ಎಚ್ಚರಿಕೆಯಿಂದ ಇರಬೇಕಿದೆ. ಯಾವುದೇ ಕಾರಣಕ್ಕೂ ಒಂಟಿಯಾಗಿ ಚಲಿಸದೆ ಸಹಾಯಕ್ಕೆ ಇನ್ನೊಬ್ಬರನ್ನು ಕರೆತನ್ನಿ, ಮೈಮೇಲಿನ ಆಭರಣದ ಬಗ್ಗೆ ಜಾಗೃತರಾಗಿರಿ, ಪ್ರತಿಹಂತದಲ್ಲೂ ನೀವು ಎಚ್ಚರಿಕೆ ವಹಿಸುವುದು ಅವಶ್ಯಕವೆಂದರು.

ಇದೇ ಸಂದರ್ಭದಲ್ಲಿ ಬ್ಯಾಂಕ್‌ನ ವ್ಯವಸ್ಥಾಪಕರು ಮತ್ತು ಸಿಬ್ಬಂದಿ ವರ್ಗಕ್ಕೂ ಸಹ ಸೂಚನೆ ನೀಡಿ, ಯಾವುದೇ ಕಾರಣಕ್ಕೂ ಸಿಸಿ ಕ್ಯಾಮರ ಕೈಕೊಡದಂತೆ ಎಚ್ಚರಿಕೆ ವಹಿಸಿ, ಗ್ರಾಹಕರು ಬ್ಯಾಂಕ್ ಒಳಗೆ ಬಂದಾಗ ಬೇರೆ ಯಾರಾದರೂ ಅಪರಿಚಿತ ವ್ಯಕ್ತಿಗಳು ಕಂಡುಬಂದರೆ ಕೂಡಲೇ ಮಾಹಿತಿ ನೀಡುವಂತೆ ಸೂಚಿಸಿದರು.

ಪೊಲೀಸ್ ಪೇದೆಗಳಾದ ತಿಲಕ್, ರಮೇಶ್,ಶ್ರೀಧರ್ ಮುಂತಾದವರು ಜಾಗೃತಿ ಮೂಡಿಸುವ ಕಾರ್ಯದಲ್ಲಿ ನೆರವಾದರು. ಬ್ಯಾಂಕ್‌ಗಳಿಗೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ಗ್ರಾಹಕರು ಸಹ ಸಕರಾತ್ಮವಾಗಿ ಅವರ ಮಾತುಗಳಿಗೆ ಸ್ಪಂದಿಸಿದ್ದು ಕಂಡುಬಂತು.

## ಫಾಸ್ಟ್ ನ್ಯೂಸ್

### ಮಹಿಳಾ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ನಬಾರ್ಡ್ ಇವರ ಸಹಯೋಗದಲ್ಲಿ ಮಾರ್ಚ್ 8 ರಂದು ಬೆಳಿಗ್ಗೆ 10 ಗಂಟೆಗೆ ನಗರದ ವಿದ್ಯಾನಗರದಲ್ಲಿರುವ ಕುವೆಂಪು ಕನ್ನಡ ಭವನದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದಎಸ್.ಎಲ್.ಭೋಜೇಗೌಡ,ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಸಗೋಡು ಜಯಸಿಂಹ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ್, ದಾವಣಗೆರೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ ಬಿ. ಇಟ್ನಾಳ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ಭಾಗವಹಿಸುವರು.

### ಮಾರ್ಚ್‌ನಲ್ಲಿ ಪ್ರತಿ ಸದಸ್ಯರಿಗೆ 15 ಕೆಜಿ ಅಕ್ಕಿ

» ದಾವಣಗೆರೆ

ಫೆಬ್ರವರಿ ಮತ್ತು ಮಾರ್ಚ್–2025ರ ಮಾಹೆಗೆ ರಾಜ್ಯದ ಅಂತ್ಯೋದಯ ಮತ್ತು ಆದತ್ಯಾ ಫಲಾನುಭವಿಗಳಿಗೆ ಅನ್ನಭಾಗ್ಯ ಯೋಜನೆಯಡಿ ನೇರ ನಗದು ವರ್ಗಾವಣೆ ಬದಲಾಗಿ ಹೆಚ್ಚುವರಿ 5 ಕೆ.ಜಿ ಓ.ಎಂ.ಎಸ್.ಎಸ್.ಡಿ ಅಕ್ಕಿ ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ. ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ 5 ಕೆ.ಜಿ ಆಹಾರಧಾನ್ಯದೊಂದಿಗೆ ರಾಜ್ಯ ಸರ್ಕಾರದ ವತಿಯಿಂದಹೆಚ್ಚುವರಿಯಾಗಿ5ಕೆ.ಜಿಆಹಾರಧಾನ್ಯದ ಬದಲಾಗಿ ಪ್ರತಿ ಕೆ.ಜಿ.ಗೆ ರೂ.34/–ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ರೂ.170/–ರಂತೆ ಹಣವನ್ನು ವರ್ಗಾಯಿಸಲಾಗುತ್ತಿತ್ತು. ಹೆಚ್ಚುವರಿ ಹಂಚಿಕೆಯನ್ನು ಏಕ–ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಎಎವೈ ಪಡಿತರ ಚೀಟಿಯ ಪ್ರತಿ ಫಲನುಭವಿಗೆ ಮತ್ತು ಆದ್ಯತಾ ಕುಟುಂಬದ ಪಿಹೆಚ್ ಹೆಚ್ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮಾರ್ಚ್–2025ರ ಮಾಹೆಯಲ್ಲಿ ಎನ್.ಎಫ್.ಎಸ್.ಎ ಆಡಿ ಎಂದಿನಂತೆ ಹಂಚಿಕೆ ಮಾಡಿರುವ ಅಕ್ಕಿ ಸೇರಿದಂತೆ ಪ್ರತಿ ಸದಸ್ಯರಿಗೆ ಒಟ್ಟು 15 ಕೆ.ಜಿ ಅಕ್ಕಿಯನ್ನು ಸಂಬಂಧಿಸಿದ ನ್ಯಾಯಬೆಲೆ ಅಂಗಡಿಗಳಿಂದ ಬಯೋಮೆಟ್ರಿಕ್ ನೀಡಿ ಪಡೆಯಬೇಕು.

### ಮೊಬೈಲ್ ಕ್ಯಾಂಟೀನ್: ಆಯ್ಕೆಪಟ್ಟಿ ಪ್ರಕಟ

» ಚಿತ್ರದುರ್ಗ

ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ, ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಹಾಗೂ ತರಬೇತಿ ಪಡೆದ ಅರ್ಹ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಸಹಾಯಧನ ನೀಡಲು ಅಭ್ಯರ್ಥಿಗಳ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಎಸ್.ಸಿ.ಎಸ್.ಪಿ, ಟಿ,ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು Enterprenuership ವಿಷಯದ ಬಗ್ಗೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಹಾಗೂ ತರಬೇತಿ ಪಡೆದ ಅರ್ಹ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ರೂ 5 ಲಕ್ಷಗಳ ಸಹಾಯಧನ ನೀಡಲು ಉದ್ದೇಶಿಸಲಾಗಿರುತ್ತದೆ. ಈ ತರಬೇತಿ ಹಾಗೂ ಸಹಾಯಧನಕ್ಕಾಗಿ ಚಿತ್ರದುರ್ಗ ಜಿಲ್ಲೆಯ ಪರಿಶಿಷ್ಟ ಜಾತಿ–06 ಮತ್ತು ಪರಿಶಿಷ್ಟ ಪಂಗಡದ–05 ಅಭ್ಯರ್ಥಿಗಳು ಸೇರಿದಂತೆ ಒಟ್ಟು 11 ಅಭ್ಯರ್ಥಿಗಳ ಗುರಿಯನ್ನು ಪ್ರಸ್ತುತ ಸಾಲಿನಲ್ಲಿ ನಿಗದಿಪಡಿಸಿ 2025ರ ಜ.23 ರಿಂದ ಜ.31ರವರೆಗೆ ಅರ್ಜಿ ಕರೆಯಲಾಗಿತ್ತು. 2025ರ ಫೆ.21ರಂದು ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದು, 2025ರ ಮಾರ್ಚ್ 04ರಂದು ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಪ್ರವಾಸೋದ್ಯಮ ಇಲಾಖೆಯ ಸೂಚನಾ ಫಲಕದಲ್ಲಿ ಅಳವಡಿಸಲಾಗಿದ್ದು, ಫಲಾನುಭವಿಗಳ ಆಯ್ಕೆಯ ಬಗ್ಗೆ ಯಾವುದಾದರು ಅಭ್ಯರ್ಥಿಗಳು ಈ ವಿಷಯದಲ್ಲಿ ಆಕ್ಷೇಪಣೆ ಇದ್ದಲ್ಲಿ ಪ್ರವಾಸೋದ್ಯಮ ಇಲಾಖೆಗೆ 2025ರ ಮಾ. 12 ರವರೆಗೆ ಆಕ್ಷೇಪಣೆ ಸಲ್ಲಿಸಬಹುದು.

# ವಿದ್ಯಾರ್ಥಿಗಳಿಗೆ, ಮಹಿಳೆಯರಿಗೆ ಹೆಚ್ಚು ಸಾಲ ಒದಗಿಸಿ ಶೈಕ್ಷಣಿಕವಾಗಿ, ಸ್ವಾವಲಂಬಿಗಳನ್ನಾಗಿಸಿ; ಸಂಸದೆ ಪ್ರಭಾ

» ದಾವಣಗೆರೆ

ವಿದ್ಯಾರ್ಥಿಗಳಿಗೆ ಹಾಗೂ ಮಹಿಳೆಯರಿಗೆ ಬ್ಯಾಂಕ್‌ಗಳು ಹೆಚ್ಚಿನ ಸಾಲ, ಸೌಲಭ್ಯ ಒದಗಿಸುವ ಕೆಲಸ ಮಾಡಬೇಕೆಂದು ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಬ್ಯಾಂಕರ್ಸ್ ತ್ರೈಮಾಸಿಕ ಸಭೆಯಲ್ಲಿ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಲ ಒದಗಿಸಬೇಕು. ಇದರಿಂದ ಅವರ ಮುಂದಿನ ಭವಿಷ್ಯ ಉತ್ತಮವಾಗಲಿದೆ. ಮತ್ತು ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿಸಲು ಬ್ಯಾಂಕ್‌ಗಳಲ್ಲಿ ಅವರಿಗೆ ಸಿಗುವ ಸಾಲ, ಸೌಲಭ್ಯಗಳನ್ನು ಕಲ್ಪಿಸಬೇಕೆಂದು ತಿಳಿಸಿದರು.

ಶೈಕ್ಷಣಿಕ ಸಾಲವಾಗಿ ಡಿಸೆಂಬರ್ ನಲ್ಲಿ 5954 ವಿದ್ಯಾರ್ಥಿಗಳಿಗೆ ನೀಡಬೇಕಾಗಿದ್ದು ಇದರಲ್ಲಿ 2665 ಮಹಿಳೆಯರು ಇದ್ದಾರೆ. ಮತ್ತು ಪಿಎಂ ವಿಶ್ವಕರ್ಮ ಯೋಜನೆಯಡಿ




11731 ಅರ್ಜಿಗಳನ್ನು ಸ್ವೀಕರಿಸಿದ್ದು ಇದರಲ್ಲಿ 4768 ಕ್ಕೆ ಮಂಜೂರಾತಿ ನೀಡಿ 5357 ಅರ್ಜಿಯನ್ನು ತಿರಸ್ಕರಿಸಲಾಗಿದೆ. ಇನ್ನೂ 1606 ಅಭ್ಯರ್ಥಿಗಳ ಅರ್ಜಿಗಳು ಬಾಕಿ ಇದ್ದು ಆದಷ್ಟು ಬೇಗ ಇತ್ಯರ್ಥ ಮಾಡಿ ಸೌಲಭ್ಯ ನೀಡಲು ಸೂಚನೆ ನೀಡಿ ಮಂಜೂರಾತಿಗಿಂತಲೂ ತಿರಸ್ಕರಿಸಿದ ಅರ್ಜಿಗಳು ಹೆಚ್ಚಿದ್ದು ವಿನಾಕಾರಣ ಅರ್ಜಿಗಳನ್ನು ತಿರಸ್ಕರಿಸಬಾರದು ಎಂದರು. ಬ್ಯಾಂಕ್‌ಗಳಿಂದ ಶೈಕ್ಷಣಿಕ ಸಾಲ, ಮನೆ ಸಾಲ, ವೃತ್ತಿಪರ ಸಾಲ ಹೀಗೆ ವಿವಿಧ ರೀತಿಯ ಸಾಲ ಸೌಲಭ್ಯಗಳನ್ನು ಜನರಿಗೆ ಒದಗಿಸಿ ಸಬಲೀಕರಣ ಗೊಳಿಸಬೇಕು. ಬ್ಯಾಂಕ್‌ಗೆ ಸಾರ್ವಜನಿಕರು ಬಂದಾಗ ಸರಿಯಾದ ರೀತಿ ಸಹಕರಿಸಿ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿ ಸದುಪಯೋಗಪಡಿಸಿಕೊಳ್ಳುವಂತೆ ಮಾಹಿತಿ ನೀಡಬೇಕು. ಸರ್ಕಾರದ ಯೋಜನೆಗಳನ್ನು ಸರಿಯಾದ ವ್ಯಕ್ತಿಗಳಿಗೆ ಸರಿಯಾದ ಸಮಯಕ್ಕೆ ತಲುಪಿಸುವ ಕಾರ್ಯ ಆಗಬೇಕಿದೆ ಎಂದರು.

ಅಷ್ಟೇ ಅಲ್ಲದೆ ಪಿಎಂ ವಿಶ್ವಕರ್ಮ ಯೋಜನೆ, ಮುದ್ರಾ ಯೋಜನೆ ಇನ್ನಿತರೆ ಯೋಜನೆಗಳಲ್ಲಿ ಅರ್ಹ ಫಲಾನುಭವಿಗಳಿಗೆ ಸ್ವಂತ ಉದ್ಯೋಗ ಕೈಗೊಳ್ಳಲು ಕೌಶಲ್ಯ ತರಬೇತಿಗಳನ್ನು ನೀಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿ.ಪಂ. ಸಿಇಓ ಸುರೇಶ್ ಬಿ. ಇಟ್ನಾಳ್ ಮಾತನಾಡಿ, ಶೈಕ್ಷಣಿಕ ಸಾಲ ಯೋಜನೆ, ಪಿಎಂಜೆಜೆವೈ, ಮುದ್ರಾ ಯೋಜನೆ, ಪ್ರಧಾನ ಮಂತ್ರಿ ಆವಾಜ್ ಯೋಜನೆಯಲ್ಲಿನ ಅರ್ಹರಿಗೆ ಸಾಲ ಸೌಲಭ್ಯ ನೀಡಬೇಕು. ಹಾಗೆಯೆ ನಗರ, ಗ್ರಾಮೀಣ ಫಲಾನುಭವಿಗಳಿಗೆ ಹಾಗೂ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ, ಮಹಿಳೆಯರಿಗೆ ಉದ್ಯೋಗಾವಕಾಶ ಕಲ್ಪಿಸಿಕೊಡುವ ಮೂಲಕ ಮತ್ತಷ್ಟು ಕ್ರಿಯಾಶೀಲರಾಗಿ ಕೆಲಸ ಮಡಬೇಕು ಎಂದರು.

ಸಭೆಯಲ್ಲಿ ನಬಾರ್ಡ್ ಅಧಿಕಾರಿ ರಶ್ಮಿ ರೇಖಾ, ಆರ್‌ಬಿಐ ಎಜಿಎಂ ಅರುಣ್ ಕುಮಾರ್, ಲೀಡ್ ಬ್ಯಾಂಕ್ ಮ್ಯಾನೇಜರ್ ಸಿದ್ದಾರ್ಥ್ ಎಸ್ ಆಚಾರ್ಯ, ಕೆನರಾ ಬ್ಯಾಂಕ್ ಎಜಿಎಂ ವೈ ವಿ.ಎನ್ ಶಿವಪ್ರಸಾದ್ ಸೇರಿದಂತೆ ವಿವಿಧ ಬ್ಯಾಂಕ್‌ಗಳ ಮ್ಯಾನೇಜರ್‌ಗಳು ಉಪಸ್ಥಿತರಿದ್ದರು.

# ಪೋಷಕರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿಸಲು ಮುಂದಾಗಬೇಕು: ಎಸ್‌ಪಿ ಉಮಾ ಪ್ರಶಾಂತ್ ಹೇಳಿಕೆ

» ದಾವಣಗೆರೆ

ಪೋಷಕರು ತಮ್ಮ ಮಕ್ಕಳಿಗೆ ಗುಣಮಟ್ಟದ ಮತ್ತು ಉನ್ನತ ಶಿಕ್ಷಣದವರೆಗೆ ವಿದ್ಯಾಭ್ಯಾಸ ಪಡೆಯಲು ನೆರವಾವಾಗಿ ಸಮಾಜದಲ್ಲಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕರಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಹೇಳಿದರು.

ನಗರದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಶುಕ್ರವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ" ಕುಂದು ಕೊರತೆ ಸಭೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮಕ್ಕಳು ವಿವಿಧ ರೀತಿಯ ದುಶ್ಚಟಗಳಿಗೆ ಹಾಗೂ ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದಾರೆ. ಅಂತಹ ಮಕ್ಕಳಿಗೆ ಅದರಿಂದಾಗುವ ದುಷ್ಪರಿಣಾಮಗಳ ಕುರಿತು ಮತ್ತಷ್ಟು ಜಾಗೃತಿ ಮೂಡಿಸುವುದರೊಂದಿಗೆ ಶಿಕ್ಷಣದ ಮಹತ್ವ ತಿಳಿಸಬೇಕು. ಜಿಲ್ಲೆಯ ವಿವಿಧ ಭಾಗಗಳಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ಹೆಚ್ಚಾಗಿದ್ದು,

ಸಂಬಂಧಪಟ್ಟವರು ಸೂಕ್ತ ಮಾಹಿತಿಯೊಂದಿಗೆ ಪ್ರಕರಣ ದಾಖಲಿಸಿದಲ್ಲಿ ನಿರ್ಧಾಕ್ಷಿಣ್ಯವಾಗಿ



ಕ್ರಮ ಕೈಗೊಳ್ಳಲಾಗುವುದು. ಅಷ್ಟೇ ಅಲ್ಲದೇ ಈ ಕುರಿತು ಮತ್ತಷ್ಟು ಅರಿವು ಮೂಡಿಸಲಾಗುವುದು. ಪೊಲೀಸ್ ಇಲಾಖೆಗೆ ಸಂಬಂಧಪಟ್ಟ ಪ್ರಕರಣಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಭಾಗವಹಿಸಿದ ದಲಿತ ಮುಖಂಡರು ಕೇಳಿದ ಪ್ರಶ್ನೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಮೂಲಕ ಸಮಸ್ಯೆಗಳನ್ನು ತ್ವರಿತಗತಿಯಲ್ಲಿ ಬಗೆಹರಿಸಿ, ಪ್ರತಿಯೊಬ್ಬ ನಾಗರೀಕನಿಗೂ ಸಮಾನ ನ್ಯಾಯ ದೊರಕಿಸುವುದೇ ಈ ಸಭೆಯ ಉದ್ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಜಿ.ಮಂಜುನಾಥ್, ವಿಜಯ್ ಕುಮಾರ್ ಎನ್.ಸಂತೋಷ್, ಅಬಕಾರಿ ಉಪ ಆಯುಕ್ತ ಸಿ.ಎನ್.ಜುನ್ನೈ, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ದಲಿತ ಸಂಘಟನೆಯ ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ: ಮಾರ್ಚ್ ಅಂತ್ಯದೊಳಗೆ ನಿಗದಿತ ಗುರಿ ಸಾಧಿಸಲು ಡಿಸಿ ಸೂಚನೆ



» ದಾವಣಗೆರೆ

2024–25 ನೇ ಸಾಲಿನಲ್ಲಿ ವಿವಿಧ ಇಲಾಖೆಗಳಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಸಂಪೂರ್ಣ ಪ್ರಗತಿಯನ್ನು ಮಾರ್ಚ್ ಅಂತ್ಯದೊಳಗೆ ಸಾಧಿಸಬೇಕೆಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಸೂಚಿಸಿದರು. ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿವಿಧ ಇಲಾಖೆಗಳಿಂದ ಪ.ಜಾತಿ ಉಪಯೋಜನೆ, ಗಿರಿಜನ ಉಪಯೋಜನೆದಡಿ ಅನುಷ್ಠಾನಗೊಳ್ಳುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯ ಒಟ್ಟು 40 ಇಲಾಖೆಗಳ ವರದಿಯನ್ನು ಪರಿಶೀಲಿಸಿದ ಅವರು, ಮಾರ್ಚ್ ಮೊದಲ ವಾರದಲ್ಲಿ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಬಿಡುಗಡೆಗೊಳಿಸಲಾದ ಅನುದಾನವನ್ನು ಬಳಕೆ ಮಾಡಿ, ವರದಿಯನ್ನು ನೀಡಬೇಕು. ಎಸ್‌ಸಿಪಿ,ಟಿಎಸ್‌ಪಿ ಯೋಜನೆಯಡಿ ಕೈಗೊಳ್ಳಲಾಗಿರುವ ಸಣ್ಣ ನೀರಾವರಿ ಮತ್ತು ಅಂರ್ಜಲ ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಸಮಯದೊಳಗೆ ಮುಗಿಸಿ ಮುಂದಿನ ಸಭೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ವರದಿಯನ್ನು ನೀಡಬೇಕು. ಅರಣ್ಯ ಇಲಾಖೆಯವರಿಗೆ ಮಾರ್ಚ್ ಅಂತ್ಯದವರೆಗೆ ವರದಿ ನೀಡದಿದ್ದಲ್ಲಿ ಸರ್ಕಾರಕ್ಕೆ ವರದಿ ನೀಡಲಾಗುವುದೆಂದು ಎಂದು ಅಧಿಕಾರಿಗಳಿಗೆ ತಿಳಿಸಿದರು. ಆಯುಷ್ ಇಲಾಖೆ ಶೇ.85, ಮಹಾನಗರಪಾಲಿಕೆ ಶೇ.90, ನೀರಾವರಿ ಇಲಾಖೆ ಶೇ.88, ನಗರಾಭಿವೃದ್ಧಿ ಇಲಾಖೆ ಶೇ.76, ವಿಶ್ವವಿದ್ಯಾನಿಲಯ ಶೇ.38, ಲೋಕೋಪಯೋಗಿ ಇಲಾಖೆ ಶೇ.35 ಇನ್ನೂ ವಿವಿಧ ಇಲಾಖೆಗಳು ಶೇ.100 ರಷ್ಟು ಪ್ರಗತಿ ಸಾಧಿಸಿವೆ. ನಿಗದಿತ ಪ್ರಗತಿ ಗುರಿ ಸಾಧಿಸದ ಕೆಲವು ಇಲಾಖೆಯ ಅಧಿಕಾರಿಗಳಿಗೆ ಮಾರ್ಚ್ ಅಂತ್ಯದೊಳಗೆ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿ ಗುರಿ ಸಾಧಿಸುವಂತೆ ತಿಳಿಸಿದರು. ಎಸ್‌ಸಿಪಿ ರೂ.261.65 ಕೋಟಿ ಹಂಚಿಕೆಯಾಗಿದ್ದು, ಬಿಡುಗಡೆಯಾದ ರೂ.144.33 ಕೋಟಿಯಲ್ಲಿ ರೂ.126.92 ಕೋಟಿ ಖರ್ಚು ಮಾಡಿ ಶೇ.87.94 ರಷ್ಟು ಪ್ರಗತಿ ಸಾಧಿಸಲಾಗಿದೆ. ಟಿಎಸ್‌ಪಿ ರೂ.116.45 ಕೋಟಿ ಹಂಚಿಕೆಯಾಗಿದ್ದು ರೂ.72.86 ಕೋಟಿ ಬಿಡುಗಡೆಯಾದ ಅನುದಾನದಲ್ಲಿ ರೂ.62.06 ಕೋಟಿ ಖರ್ಚು ಮಾಡಿ ಶೇ.85.17 ರಷ್ಟು ಪ್ರಗತಿ ಸಾಧಿಸಲಾಗಿದೆ. ಸಭೆಯಲ್ಲಿ ಜಿ.ಪಂ. ಉಪಕಾರ್ಯದರ್ಶಿ ಕೃಷ್ಣನಾಯ್ಕ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಾಗರಾಜ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಡಿಡಿಪಿಐ ಕೊಟ್ರೇಶ್, ಡಿಹೆಚ್‌ಓ ಡಾ;ಷಣ್ಮುಖಪ್ಪ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಚಳ್ಳಕೆರೆ: ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ರಾಯರ 430ನೇ ವರ್ಧಂತ್ಯೋತ್ಸವ

» ಚಳ್ಳಕೆರೆ

ಇಲ್ಲಿನ ವಾಲ್ಮೀಕಿ ನಗರದ ನಂಜನಗೂಡು ಶ್ರೀರಾಘವೇಂದ್ರಸ್ವಾಮಿಮಠದಲ್ಲಿಗುರುರಾಘವೇಂದ್ರರ 430ನೇ ವರ್ಧಂತೋತ್ಸವ ಕಾರ್ಯಕ್ರಮವನ್ನು ಭಕ್ತಿ, ಶ್ರದ್ಧೆಯಿಂದ ಆಚರಿಸಲಾಯಿತು. ಮಠದ ವಿಚಾರಣಕರ್ತರಾದ ಶ್ರೀನಾಥಭಟ್ ಮತ್ತು ಗುರುನಾಥಭಟ್ ಮಾರ್ಗದರ್ಶನದಲ್ಲಿ ವ್ಯವಸ್ಥಾಪಕರಾದ ಶ್ರೀನಾಥ, ಪ್ರಧಾನ ಆರ್ಚಕರಾದ ಆನಂದಆಚಾರ್, ರಾಘವೇಂದ್ರಆಚಾರ್ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಕೈಗೊಂಡರು. ಶ್ರೀಸ್ವಾಮಿಯ ವೃಂದಾವನವನ್ನು ವಿವಿಧ ಹೂಗಳಿಂದ ಅಲಂಕರಿಸಲಾಗಿತ್ತು. ಬೆಳಿಗೆಯಿಂದಲೇ ನೂರಾರು ಭಕ್ತರು ಆಗಮಿಸಿ ಸ್ವಾಮಿಯ ದರ್ಶನ 'ಡೆದರು.

ಗುರುವಾರ ಸಂಜೆ ನಡೆದ ವರ್ಧಂತೋತ್ಸವದ



ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ನಿರೀಕ್ಷೆಗೂ ಮೀರಿ ಹೆಚ್ಚಿನ ಭಕ್ತರು ಆಗಮಿಸಿದ್ದರು ಶ್ರೀಮಠದ ಒಳ ಹಾಗೂ ಹೊರ ಆವರಣವೆಲ್ಲಾ ಭಕ್ತರಿಂದ ತುಂಬಿತ್ತು. ಪೂಜಾ ಕಾರ್ಯಕ್ರಮದ ನಂತರ ಆಗಮಿಸಿದ ಭಕ್ತರಿಗೆ ಫಲಮಂತ್ರಾಕ್ಷತೆ, ಪ್ರಸಾದ ವಿತರಣೆ ಮಾಡಲಾಯಿತು. ವಿಚಾರಣಕರ್ತ ಶ್ರೀನಾಥಭಟ್ ಮಾತನಾಡಿ, ಶ್ರೀರಾಘವೇಂದ್ರಸ್ವಾಮಿಗಳ 430ನೇ ವರ್ಧಂತೋತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದಿದ್ದಾರೆ. ಈ ಬಾರಿ ನಿರೀಕ್ಷೆಗೂ ಮೀರಿ ಹೆಚ್ಚಿನ ಭಕ್ತರು ಮಠಕ್ಕೆ ಆಗಮಿಸಿದ್ದು ಸಂತಸ ತಂದಿದೆ. ಮುಂಬರುವ ದಿನಗಳಲ್ಲೂ ಭಕ್ತರ ಸಹಕಾರದಿಂದ ಗುರುಗಳಸೇವೆಯನ್ನು ಮುಂದುವರೆಸಲಾಗುವುದು ಎಂದರು.

## ಪ್ರಮುಖ ಸುದ್ದಿ

# ಶ್ರದ್ಧಾ ಭಕ್ತಿಯಿಂದ ನಡೆದ ಬಸವೇಶ್ವರ ಸ್ವಾಮಿ ಕೆಂಡಾರ್ಚನೆ

» ಚಿತ್ರದುರ್ಗ

ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಭೀಮಸಮುದ್ರ ಮಜುರೆ ಬಸವಾಪುರದ ಶ್ರೀ ಮಾವಿನಹಳ್ಳಿ ಬಸವೇಶ್ವರ ಸ್ವಾಮಿಯ ರಥೋತ್ಸವದ ಅಂಗವಾಗಿ ಶುಕ್ರವಾರದಂದು ಸ್ವಾಮಿಯ ಕೆಂಡಾರ್ಚನೆ ಕಾರ್ಯಕ್ರಮ ನಡೆಯಿತು.

ಇಂದು ಬೆಳಿಗ್ಗೆ ಸ್ವಾಮಿಗೆ ಹೂವಿನ ಉತ್ಸವ ನಡೆದಿದ್ದು, ನಂತರ ಪಲ್ಲಕ್ಕಿಯಲ್ಲಿ ಸ್ವಾಮಿಯನ್ನು ಕುಳ್ಳರಿಸಿ ದೇವಾಲಯದ ಸುತ್ತಾ–ಮುತ್ತಾ ಪ್ರದೇಶದಲ್ಲಿ ಮೆರವಣಿಗೆಯನ್ನು ನಡೆಸಲಾಯಿತು. ರಥೋತ್ಸವದ ಅಂಗವಾಗಿ ಸ್ವಾಮಿಗೆ ಕಂಕಣಧಾರಣೆ, ಆಶ್ವೋತ್ಸವ, ವೃಷಭೋತ್ಸವ ಕಾರ್ಯಕ್ರಮ ನಡೆಯಿತು.

ಕೆಂಡಾರ್ಚನೆ ಸಮಯದಲ್ಲಿ ಕಡೂರಿನಿಂದ ಬಂದಿದ್ದ ಚನ್ನವೀರಪ್ಪ ಮತ್ತು ತಂಡದವರು ಸ್ವಾಮಿಯ ಮುಂದೆ ವೀರಭದ್ರ ಸ್ವಾಮಿಯ ಒಡಪುಗಳನ್ನು ಹೇಳುವುದರ ಮೂಲಕ ಪಲ್ಲಕ್ಕಿಯ ಮೆರವಣಿಗೆಯನ್ನು ನಡೆಸಲಾಯಿತು. ಮೆರವಣಿಗೆಯ ದಾರಿಯುದ್ದಕ್ಕೂ ಆಗಮಿಸಿದ ಭಕ್ತಾಧಿಗಳು ಮಾವಿನಹಳ್ಳಿ ಬಸವೇಶ್ವರ ಮಹಾರಾಜ್ ಕೀ ಜೈ, ವೀರಭದ್ರ ಸ್ವಾಮಿಜೀ ಕೀ ಎಂಬ



ಘೋಷಣೆಗಳು ಕೇಳಿ ಬಂದವು.

ಸ್ವಾಮಿಯನ್ನು ಕುಳ್ಳರಿಸಿದ ಪಲ್ಲಕ್ಕಿಯನ್ನು ವಿವಿಧ ರೀತಿಯ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ಅದರಲ್ಲಿ ಸ್ವಾಮಿಯ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿ ಮೆರವಣಿಗೆಯನ್ನು ನಡೆಸಲಾಯಿತು. ನಂತರ ದೇವಾಲಯದ ಆವರಣದಲ್ಲಿ ನಿರ್ಮಾಣ ಮಾಡಲಾದ ಕೆಂಡದ ಕುಂಡದಲ್ಲಿ ಸ್ವಾಮಿಯ ಪಲ್ಲಕ್ಕಿಯನ್ನು ಹೊತ್ತ ಭಕ್ತಾಧಿಗಳು ಅದರ ಮೇಲೆ ಆಗಮಿಸುವುದರ ಮೂಲಕ ಕೆಂಡಾರ್ಚನೆ ಕಾರ್ಯಕ್ರಮವನ್ನು ನೇರವೇರಿಸಲಾಯಿತು. ತದ ನಂತರ ಭಕ್ತಾಧಿಗಳು ಕೆಂಡವನ್ನು ತುಳಿಯವುದರ ಮೂಲಕ ಸ್ವಾಮಿಯ ಕೃಪೆಗೆ ಪಾತ್ರರಾದರು ಇದೇ ರೀತಿ ದೇವರನ್ನು ಹೊತ್ತ ಪಲ್ಲಕ್ಕಿಯೂ ಕೆಂಡದ ಮೇಲೆ ಮೂರು ಸುತ್ತು ಹಾಕಲಾಯಿತು. ರಥೋತ್ಸವ ಸಮಯದಲ್ಲಿ ಆಗಮಿಸುವ ಭಕ್ತಾಧಿಗಳಿಗೆ ಶ್ರೀ ಮಾವಿನಹಳ್ಳಿ ಬಸವೇಶ್ವರಸ್ವಾಮಿ ಟ್ರಸ್ಟ್‌ವತಿಯಿಂದ ದಾಸೋಹ ಸೇವೆಯನ್ನು ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಚಿತ್ರದುರ್ಗ ಬೃಹನ್ಮಠದ ಡಾ.ಬಸವಪ್ರಭುಶ್ರೀಗಳು, ಮಾಜಿ ಶಾಸಕರಾದ ಎಸ್.ಕೆ. ಬಸವರಾಜನ್, ಬಿಜೆಪಿಯ ಸುರೇಶ್ ಸಿದ್ದಾಪುರ, ವೀರಶೈವ ಸಮಾಜದ ಮುಖಂಡರಾದ ಕೆ.ಇ.ಬಿ.ಷಣ್ಮುಖಪ್ಪ, ಶ್ರೀ ಮಾವಿನಹಳ್ಳಿ ಬಸವೇಶ್ವರಸ್ವಾಮಿಟ್ರಸ್ಟ್‌ನಪದಾಧಿಕಾರಿಗಳು ಉಪಸ್ಥಿತರಿದ್ದರು.

ಮಾ.08 ರಂದು ಸಂಜೆ 4 ಗಂಟೆಗೆ ಸ್ವಾಮಿಗೆ ಹೂವಿನ ಪಲ್ಲಕ್ಕಿ ಉತ್ಸವದ ನಂತರ 5 ಗಂಟೆಗೆ ಶ್ರೀ ಸ್ವಾಮಿಯ ರಥೋತ್ಸವ ಕಾರ್ಯಕ್ರಮನಡೆಯಲಿದೆ.ಮಾ.09ರಂದು ಸಂಜೆ 5 ಕ್ಕೆ ಕಂಕಣ ವಿಸರ್ಜನೆ ಹಾಗೂ ಮಹಾ ಮಹಾಮಂಗಳಾರತಿಯೊಂದಿಗೆ ಸ್ವಾಮಿಯ ರಥೋತ್ಸವದ ಸೇವಾ ಕಾರ್ಯಕ್ರಮ ಮುಕ್ತಾಯವಾಗಲಿದೆ. ಶ್ರೀ ಸ್ವಾಮಿಯ ದೇವಸ್ಥಾನದ ನೂತನ ಕಟ್ಟಡದ ಕಾರ್ಯ ಪ್ರಗತಿಯಲ್ಲಿದ್ದು ಇದರ ಅಂದಾಜು ಮೊತ್ತ ಸುಮಾರು ರೂ.5 ಕೋಟಿಗಳಾಗಿರುತ್ತದೆ. ಆದ್ದರಿಂದ ಭಕ್ತಾದಿಗಳು ನೂತನ ದೇವಸ್ಥಾನದ ನಿರ್ಮಾಣಕ್ಕೆ ಹೆಚ್ಚಿನ ಧನಸಹಾಯ ಮಾಡುವವರು ಹಾಗೂ ವಾಗ್ದಾನ ಮಾಡಿರುವವರು ಜಾತ್ರಾ ಸಮಯದಲ್ಲಿ ಹಣವನ್ನು ಕೊಟ್ಟು ಶ್ರೀ ಸ್ವಾಮಿ ಕೃಪೆಗೆ ಪಾತ್ರರಾಗಬೇಕಾಗಿ ವಿನಂತಿ ಮಾಡಲಾಗಿದೆ. ಇದ್ದಲ್ಲದೆ ಹಿಂದಿನ ವರ್ಷ ರಥೋತ್ಸವ ಸಮಯದಲ್ಲಿ ಭಾವುಟ ಮತ್ತು ಹೂವಿನ ಹಾರಗಳನ್ನು ಹರಾಜಿನಲ್ಲಿ ಪಡೆದವರು ಶ್ರೀ ಸ್ವಾಮಿಯ ರಥೋತ್ಸವದ ದಿವಸ ಹಣ ಕೊಟ್ಟು ರಸೀದಿಯನ್ನು ಪಡೆಯಬೇಕೆಂದು ಮನವಿ ಮಾಡಲಾಗಿದೆ.

## ಫಾಸ್ಟ್ ನ್ಯೂಸ್

### ಭಾಗ್ಯಲಕ್ಷ್ಮೀ ಬಾಂಡ್ ನೋಂದಣಿ,ಪರಿಪಕ್ವ ಮೊತ್ತ ಪಾವತಿ: ಅಂಗನವಾಡಿ ಕಾರ್ಯಕರ್ತೆಯರನ್ನು ಸಂಪರ್ಕಿಸಲು ಸೂಚನೆ

» **ಚಿತ್ರದುರ್ಗ**

ಭಾಗ್ಯಲಕ್ಷ್ಮೀ (ಸುಕನ್ಯ ಸಮೃದ್ಧಿ ಯೋಜನೆ) ಯೋಜನೆಯು 2006-07ನೇ ಸಾಲಿನಿಂದ ಜಾರಿಯಾಗಿದ್ದು, ಪ್ರಸ್ತುತ ನೋಂದಣಿ ಜಾರಿಯಲ್ಲಿದ್ದು, ಈಗಾಗಲೇ ನೋಂದಣಿಯಾಗಿ ಸೌಲಭ್ಯ ಪಡೆದಿರುವ ಫಲಾನುಭವಿಗಳಿಗೆ 2024-25ನೇ ಸಾಲಿನಿಂದ ಪರಿಪಕ್ವ ಮೊತ್ತ ಒದಗಿಸಬೇಕಾಗಿರುತ್ತದೆ. ಪರಿಪಕ್ವ ಮೊತ್ತ ಒದಗಿಸಲು ಹಾಗೂ ಹೊಸದಾಗಿ ಭಾಗ್ಯಲಕ್ಷ್ಮೀ ಬಾಂಡ್ (ಸುಕನ್ಯ ಸಮೃದ್ಧಿ ಯೋಜನೆ) ಪಡೆಯುವ ಕ್ರಮಗಳ ಬಗ್ಗೆ ತಾಲ್ಲೂಕು ಮಟ್ಟದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಹಾಗೂ ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆಯರನ್ನು ಸಂಪರ್ಕಿಸಬಹುದಾಗಿದೆ. ಭಾಗ್ಯಲಕ್ಷ್ಮೀ (ಸುಕನ್ಯ ಸಮೃದ್ಧಿ ಯೋಜನೆ) ಯೋಜನೆಯಡಿ ನೋಂದಣಿಯಾಗಿರುವ ಎಲ್ಲಾ ಫಲಾನುಭವಿಗಳಿಗೆ, ಸಾರ್ವಜನಿಕರ ಗಮನಕ್ಕೆ ತರಬಯಸುವುದೇನೆಂದರೆ ಈ ಯೋಜನೆಯು ಕರ್ನಾಟಕ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದ್ದು, ನೋಂದಣಿ ಹಾಗೂ ಪರಿಪಕ್ವ ಮೊತ್ತ ಪಾವತಿಯು ಸಂಪೂರ್ಣವಾಗಿ ಉಚಿತವಾಗಿರುತ್ತದೆ. ಯಾವುದೇ ತಾಲ್ಲೂಕು ಕಛೇರಿಗಳಲ್ಲಿ ಮದ್ಯವರ್ತಿಗಳಾಗಲೀ ಅಥವಾ ಸಿಬ್ಬಂದಿಗಳಾಗಲೀ ಹಣ ಕೇಳಿದಲ್ಲಿ ನೇರವಾಗಿ ಸಂಬಂಧಪಟ್ಟ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು-9448566058, ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು-9448873683, ಚಳ್ಳಕೆರೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು-9945888425, ಹಿರಿಯೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು-7892661086, ಹೊಳಲ್ಕೆರೆಶಿಶುಅಭಿವೃದ್ಧಿಯೋಜನಾಧಿಕಾರಿಗಳು-9481182921, ಹೊಸದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು -8867404421, ಮೊಳಕಾಲ್ಮೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು -7353002417, ಚಿತ್ರದುರ್ಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು- 9480500575 ಅವರನ್ನು ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### ಎನ್‌ಸಿಸಿ ಬೆಟಾಲಿಯನ್‌ಗೆ ಮಾಜಿ ಸೈನಿಕರ ನೇಮಕ

» **ಚಿತ್ರದುರ್ಗ**

ಕರ್ನಾಟಕ ಮತ್ತು ಗೋವಾ ಎನ್.ಸಿ.ಸಿ. (Nationalcadetcorps)ನಿರ್ದೇಶನಾಲಯವು ಬೆಂಗಳೂರು, ಮೈಸೂರು, ಮಂಗಳೂರು, ಬೆಳಗಾವಿ, ರಾಯಚೂರು, ಮತ್ತು ಶಿವಮೊಗ್ಗದ ಎನ್.ಸಿ.ಸಿ. ಬೆಟಾಲಿಯನ್‌ಗಳಿಗೆ ಹೆಚ್ಚುವರಿ ತರಬೇತಿ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಜಿ ಸೈನಿಕರನ್ನು ನೇಮಿಸಿಕೊಳ್ಳಲು ಉದ್ದೇಶಿಸಿದ್ದು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಮಾಜಿ ಸೈನಿಕರನ್ನು ಎನ್‌ಸಿಸಿ ಬೆಟಾಲಿಯನ್‌ಗಳಿಗೆ ಹೆಚ್ಚುವರಿ ಸಿಬ್ಬಂದಿಗಳಾಗಿ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು ಉದ್ದೇಶಿಸಲಾಗಿದ್ದು, ಭೂ ಸೇನೆಯಿಂದ ಆಕ್ಟೋಬರ್ 2022ರ ನಂತರ ನಿವೃತ್ತರಾಗಿರುವ ಜೆ.ಸಿ.ಓ ಹಾಗೂ ಹವಾಲ್ದಾರ್ ರ್‍ಯಾಂಕ್‌ನ (ಎಮ್‌ಎಸಿಪಿ ಹವಾಲ್ದಾರ್‌ಗಳನ್ನು ಪರಿಗಣಿಸುವುದಿಲ್ಲ) ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.ಸೈನ್ಯದಲ್ಲಿ ದುರ್ನಡತೆ ಮತ್ತು ಯಾವುದೇ ವೈದ್ಯಕೀಯ ಕಾರಣಗಳಿಂದ ಸೈನ್ಯದಿಂದ ಬಿಡುಗಡೆಗೊಂಡಿರುವವರು ಅರ್ಜಿ ಸಲ್ಲಿಸಲು ಅರ್ಹರಲ್ಲ. ಆಸಕ್ತ ಮಾಜಿ ಸೈನಿಕರು 13 ಮಾರ್ಚ್ 2025 ರೊಳಗೆ ಅರ್ಜಿ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಇಮೇಲ್ : itdirpc.kardte@nccindia.nic.in ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು https://nis.bisag-n.gov.in/nis/downloads-public ಜಾಲತಾಣವನ್ನು ಬಳಸಬೇಕು. ನಿರ್ದೇಶನಾಲಯ (ಕರ್ನಾಟಕ ಮತ್ತು ಗೋವಾ) ಕೆಎಸ್‌ಸಿಎಮ್‌ಎಫ್ ಬಿಲ್ಡಿಂಗ್, 4ನೇ ಮಹಡಿ ನಂ-8 ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-560001 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಸಮನ್ವಯ ಸಮಿತಿ ಸಭೆ

» **ದಾವಣಗೆರೆ**

ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಮಾರ್ಚ್ 11 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದ ಕೊಠಡಿ ಸಂಖ್ಯೆ:28 ರಲ್ಲಿ ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದ್ದಾರೆ.

# ಸ್ಮಾರಕಗಳ ಉಳಿವಿಗೆ ಹೆಚ್ಚಿನ ಒತ್ತು ಕೊಡಬೇಕು

» **ಚಿತ್ರದುರ್ಗ**



ಕರ್ನಾಟಕದಲ್ಲಿನ ಸಂಸ್ಥಾನಗಳನ್ನು ಸಂಗ್ರಹಿಸಿದರೆ ಸಂಶೋಧನೆಗೆ ಇನ್ನು ಹೆಚ್ಚಿನ ಅನುಕೂಲವಾಗುತ್ತದೆಂದು ಹಂಪಿ ಕನ್ನಡ ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಲಕ್ಷ್ಮಣ್ ತೆಲಗಾವಿ ಹೇಳಿದರು.

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಸರ್ಕಾರಿ ಕಲಾ ಕಾಲೇಜು ಇತಿಹಾಸ ವಿಭಾಗ, ಇತಿಹಾಸ ಅಧ್ಯಾಪಕರ ವೇದಿಕೆ, ದಾವಣಗೆರೆ ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ಸರ್ಕಾರಿ ಕಲಾ ಕಾಲೇಜು(ಸ್ವಾಯತ್ತ) ಇಲ್ಲಿ ಎರಡು ದಿನಗಳ ಕಾಲ ನಡೆದ ಚಿತ್ರದುರ್ಗ ಜಿಲ್ಲೆಯ ಸ್ಥಾನಿಕ ಸಂಸ್ಥಾನಗಳು ಕುರಿತ ರಾಷ್ಟ್ರೀಯ ವಿಚಾರ ಸಂಕಿರಣದಸಮಾರೋಪಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಕೆಳದಿ, ಸುರಪುರ, ಯಲಹಂಕ, ಕಿತ್ತೂರು ಬಿಟ್ಟರೆ ಎಲ್ಲಿಯೂ ಸ್ಥಳೀಯ ಸಂಸ್ಥಾನಗಳ ಕುರಿತು ಉಲ್ಲೇಖವಿಲ್ಲ. ಇತಿಹಾಸದಿಂದ ಗುರುತಿಸಲ್ಪಟ್ಟಿರುವ ಚಿತ್ರದುರ್ಗ ಹೊಸ ಹೊಸ ಸಂಶೋಧನೆಗಳಿಗೆ ವಿದ್ವಾಂಸರುಗಳನ್ನು ತೆರೆದುಕೊಳ್ಳುತ್ತಿದೆ. 1773-1783 ರವರೆಗೆ ಸ್ಥಾನಿಕ ಸಂಸ್ಥಾನಗಳ ಕುರಿತು ಸಂಶೋಧನೆಯಾಗಬೇಕು. ಸಾಮಾಜಿಕ, ಧಾರ್ಮಿಕ, ರಾಜಕೀಯ, ಶೈಕ್ಷಣಿಕ, ಆರ್ಥಿಕವಾಗಿ ಯಾವುದೇ ರಂಗ ಪ್ರವೇಶಿಸಿದರೂ ಮಾಹಿತಿಯ ಕೊರತೆಯ ಕಾರಣಕ್ಕೆ ನಿರ್ಣಯ ಕೈಗೊಳ್ಳಲು ಆಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸ್ಥಾನಿಕ ಸಂಸ್ಥಾನಗಳ ಕುರಿತು ಅಧ್ಯಯನ ನಡೆಸಬೇಕಾದರೆ ಆಕರಗಳು ಸೃಷ್ಠಿಯಾಗಬೇಕು. ಪ್ರಜಾಪ್ರಭುತ್ವದ ಬೀಜ ಅಂಕುರಿಸಿರುವುದು ಇತಿಹಾಸದ ಸಾಮ್ರಾಜ್ಯದಲ್ಲಿ. ಚಿತ್ರದುರ್ಗದ ನಾಯಕರನ್ನು ಅರಸರು ಎಂದು ಕರೆಯುವುದರಲ್ಲಿ ಯಾವುದೇ ತಕರಾರು ಇಲ್ಲ. 211 ವರ್ಷಗಳ ಕಾಲ ಹದಿಮೂರು ಪಾಳೆಯಗಾರರು ಇಲ್ಲಿ ಆಳ್ವಿಕೆ ನಡೆಸಿದ್ದಾರೆ. ಸ್ಮಾರಕಗಳ ಉಳಿವಿಗೆ ಹೆಚ್ಚಿನ ಒತ್ತು ಕೊಡಬೇಕಿದೆ. ಇದುವರೆವಿಗೂ ಆಗಿರುವ ಸಂಶೋಧನೆಗಳು ಸಮಗ್ರವೆ ಎನ್ನುವುದನ್ನು ಎಲ್ಲರೂ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ ಎಂದರು.

ಹುಲ್ಲೂರು ಶ್ರೀನಿವಾಸ ಜೋಯಿಸರು ಸಂಗ್ರಹಿಸಿರುವ ದಾಖಲೆಗಳು ಪ್ರಯೋಜನವಾಗಿದೆ. ಚಿತ್ರದುರ್ಗದ ಬೆಟ್ಟದಲ್ಲಿ ಹಲವಾರು ವರ್ಷಗಳ ಹಿಂದೆ ಸಂಶೋಧನೆಯಾಗಿದೆ. ಭೂಶೋಧನೆ ಹಂಪಿಯಲ್ಲಿ ಆಗುತ್ತಿದೆ. ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿದ್ದ ಕೆ.ಅಮರನಾರಾಯಣ ಕೋಟೆಯಲ್ಲಿರುವ ಗೋಪಾಲಸ್ವಾಮಿ ಹೊಂಡದ ನೀರು ಖಾಲಿ ಮಾಡಿಸಿ ತಳದಲ್ಲೇನಿದೆ ಎನ್ನುವುದನ್ನು ಪ್ರತ್ಯಕ್ಷವಾಗಿ ಕಾಣುವ ಕುತೂಹಲದಲ್ಲಿದ್ದರು. ಅದಕ್ಕೆ ಪುರಾತತ್ವ ಇಲಾಖೆಯವರು ಅವಕಾಶ ಕೊಡಲಿಲ್ಲ. ಆಗ ನನ್ನನ್ನು ಒಳಗೊಂಡಂತೆ ಸಂಶೋಧಕರುಗಳೆಲ್ಲಾ ಧ್ವನಿಗೂಡಿಸಿದೆವು. ಇದಕ್ಕೆ ಗಟ್ಟಿ ಧ್ವನಿಯಿಲ್ಲವೇ ಇಲ್ಲ, ಆಶಯಕ್ಕೆ ಬೆಲೆ ಸಿಗಲಿಲ್ಲವೇ ಎನ್ನುವುದೇ ಗೊತ್ತಾಗಲಿಲ್ಲ ಎಂದು ವಿಷಾಧಿಸಿದರು.

ಹಂಪಿ, ಕಿತ್ತೂರು ಉತ್ಸವಕ್ಕಿಂತ ಚಿತ್ರದುರ್ಗದ ರಾಜ ಬೀದಿ ದೊಡ್ಡಪೇಟೆಯಲ್ಲಿ ನಡೆಯುವ ಬರಗೇರಮ್ಮ-ತಿಪ್ಪಿನ ಘಟ್ಟಮ್ಮ ಅಕ್ಕ-ತಂಗಿ ಭೇಟಿ ಅದ್ದೂರಿಯಾಗಿ ನಡೆಯಬೇಕು. ಇತಿಹಾಸಕ್ಕೆ ಐತಿಹ್ಯ ಅಂಟಿಕೊಂಡಿದೆ ಎಂದರು.

ಪರಪ್ಪನ ಅಗ್ರಹಾರ ಬಂಧಿಖಾನೆಯ ನಿವೃತ್ತ ಅಧೀಕ್ಷಕ ಹರ್ತಿಕೋಟೆ ಎಚ್.ವಿ.ವೀರೇಂದ್ರಸಿಂಹ ಮಾತನಾಡಿ ಚಿತ್ರದುರ್ಗದ ಕೋಟೆಗಳು ದುಸ್ಥಿತಿಯಲ್ಲಿವೆ. ರಕ್ಷಣೆಬಗ್ಗೆರಾಷ್ಟ್ರೀಯವಿಚಾರಸಂಕಿರಣದಲ್ಲಿ ಚರ್ಚೆಯಾಗಬೇಕಿತ್ತು. ಪಾಳೆಯಗಾರರು ಆಳ್ವಿಕೆ ನಡೆಸಿದ ಸ್ಥಳ ಚಿತ್ರದುರ್ಗ. ಪಾಳೆಯಗಾರರು ಕೇವಲ ಕೋಟೆಯನ್ನು ಆಳಲಿಲ್ಲ. ಎಲ್ಲಾ ಜಾತಿ ಧರ್ಮದ ಪ್ರಜೆಗಳ ರಕ್ಷಣೆಗೆ ಹೋರಾಡಿದರು. ಚಿತ್ರದುರ್ಗ ಅಂದಾಕ್ಷಣ ರಾಜವೀರ ಮದಕರಿನಾಯಕ ನೆನಪಿಗೆ ಬರುತ್ತಾರೆಂದರು.ದಾವಣಗೆರೆ ಎಂ.ಆರ್.ಎಂ.ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಬಿ.ಸಿ.ರಾಕೇಶ್ ಮಾತನಾಡುತ್ತ ಚಿತ್ರದುರ್ಗದ ಕೋಟೆಯ ಜೀರ್ಣೋದ್ದಾರವಾದರೆ ಇಡಿ ನಗರವೇ ಅಭಿವೃದ್ದಿಯಾದಂತೆ. ಮಧುರೆ ದೇವಸ್ಥಾನಗಳಿಂದ ಪ್ರಸಿದ್ದಿ ಪಡೆದಿದೆ ಎಂದು ನೆನಪಿಸಿದರು.

ಸ್ನಾತಕೋತ್ತರ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ಆರ್.ಶಿವಪ್ಪ ಮಾತನಾಡಿ ಚಿತ್ರದುರ್ಗದ ಮಣ್ಣಿನಲ್ಲಿಯೇ ಇತಿಹಾಸ ಬೆರೆತಿದೆ. ಹಳೆ ಶಿಲಾಯುಗದಿಂದ ಹಿಡಿದು

ಅಶೋಕ ಆಳ್ವಿಕೆ ನಡೆಸಿದ ಕುರುಹುಗಳು, ಶಾಸನಗಳಿವೆ. ಪಾಳೆಯಗಾರರು, ಅರಸರ ಕುರಿತು ಸಂಶೋಧನೆ ನಡೆಸುವ ವಿಚಾರಗಳಿವೆ. ಚಿತ್ರದುರ್ಗದ ಇತಿಹಾಸ ಬೆಳಕಿಗೆ ತರಲು ಹಂಪಿ ವಿಶ್ವವಿದ್ಯಾನಿಲಯದ ಕೊಡುಗೆ ದೊಡ್ಡದು ಎಂದು ಹೇಳಿದರು.

ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು.

ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಡಿ.ಗೋಪಾಲಸ್ವಾಮಿನಾಯಕ, ಸಹ ಪ್ರಾಧ್ಯಾಪಕರುಗಳಾದ ಪ್ರೊ. ಶಿವಪ್ರಸಾದ್, ಪ್ರೊ.ಬಿ.ಸಿ. ಕೃಷ್ಣಪ್ರಸಾದ್‌ವಿಚಾರ ಸಂಕಿರಣದ ಸಂಘಟನಾ ಕಾರ್ಯದರ್ಶಿ ಡಾ.ಬಿ.ಸುರೇಶ್, ಕಚೇರಿ ಅಧೀಕ್ಷಕ ಎ.ಸಿ.ಹರೀಶ್‌ಬಾಬುರೆಡ್ಡಿ ಇವರುಗಳು ವೇದಿಕೆಯಲ್ಲಿದ್ದರು. ಡಾ.ಜಿ.ಓ.ಶಿವರಾಜ್‌ರವರ ಚಿತ್ರದುರ್ಗ ಪಾಳೆಯಗಾರರ ಕಾಲದ ಆರ್ಥಿಕ ನೀತಿ ಮತ್ತು ಕೃಷಿ ನೀತಿ ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು.ಸಮಾರೋಪ ಸಮಾರಂಭದಲ್ಲಿ ಪಿ.ಹೆಚ್.ಡಿ. ಪಡೆದ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

# 1.10 ಕೋಟಿ ರೂ.ವೆಚ್ಚದಲ್ಲಿ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪ ಭೂಮಿಪೂಜೆ

» **ಹೊಳಲ್ಕೆರೆ**



ಅಧಿಕಾರ ಶಾಶ್ವತವಲ್ಲ. ಜವಾಬ್ದಾರಿ ಏನೆನ್ನುವುದನ್ನು ಅರ್ಥ ಮಾಡಿಕೊಂಡು ಕ್ಷೇತ್ರದ ಅಭಿವೃದ್ದಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ

ಯಾರು ಒಳ್ಳೆಯವರು, ಯಾರು ಕೆಟ್ಟವರು ಎನ್ನುವುದನ್ನು ಅರಿತು ಚುನಾವಣೆಯಲ್ಲಿ ಮತ ನೀಡುವ ಜವಾಬ್ದಾರಿ ನಿಮ್ಮದು ಎಂದು ಶಾಸಕ ಡಾ.ಎಂ.ಚಂದ್ರಪ್ಪ ಜನತೆಗೆ ಕರೆ ನೀಡಿದರು.

ತಾಲ್ಲೂಕಿನ ಗೊಲ್ಲರಹಳ್ಳಿ ಗ್ರಾಮದಲ್ಲಿ 1.10 ಕೋಟಿ ರೂ.ವೆಚ್ಚದಲ್ಲಿ ಉಪ್ಪರಿಗೇನಹಳ್ಳಿಯಿಂದ ಗೊಲ್ಲರಹಳ್ಳಿವರೆಗೂನೂತನಸಿ.ಸಿ.ರಸ್ತೆನಿರ್ಮಾಣ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

ಪರಿಸ್ಥಿತಿಗನುಗುಣವಾಗಿ ಸಮಸ್ಯೆಗಳನ್ನು ತಿಳಿದುಕೊಂಡು ಕೆಲಸ ಮಾಡುತ್ತಿದ್ದೇನೆ. ತಾಲ್ಲೂಕಿನಾದ್ಯಂತ ಕೆರೆ ಕಟ್ಟೆ, ಚೆಕ್‌ಡ್ಯಾಂಗಳನ್ನು ಕಟ್ಟಿಸಿರುವುದರಿಂದ ಬೋರ್‌ವೆಲ್‌ಗಳಲ್ಲಿ ನೀರಿನ ಮಟ್ಟ ಜಾಸ್ತಿಯಾಗಿದೆ. ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಕ್ಷೇತ್ರಾದ್ಯಂತ ಪ್ರತಿ ಮನೆ ಮನೆಗೆ ಕುಡಿಯುವ ನೀರು ಪೂರೈಸುವುದಕ್ಕಾಗಿ 367 ಕೋಟಿ ರೂ.ಗಳನ್ನು ಖರ್ಚು ಮಾಡಲಾಗುತ್ತಿದ್ದು, ಎಲ್ಲಾ ಕಡೆ ಪೈಪ್‌ಲೈನ್ ಅಳವಡಿಸುವ ಕೆಲಸವಾಗುತ್ತಿದೆ. ಗುಣಮಟ್ಟದ ಸಿ.ಸಿ.ರಸ್ತೆ, ಶಾಲಾ-ಕಾಲೇಜು, ಹೈಟೆಕ್ ಆಸ್ಪತ್ರೆ ಕಟ್ಟಿಸಿದ್ದೇನೆ. ಎಲ್.ಕೆ.ಜಿ.ಯಿಂದ ಪಿ.ಯು.ಸಿ.ವರೆಗೆ ಹಳ್ಳಿಯ ಬಡ ಮಕ್ಕಳಿಗೆ ಒಂದೆ ಕಡೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ಶೈಕ್ಷಣಿಕ ವರ್ಷದಿಂದ ಕರ್ನಾಟಕ ಪಬ್ಲಿಕ್ ಶಾಲೆ ಆರಂಭಿಸಲಾಗುವುದು. ಗ್ರಾಮೀಣ ಭಾಗದಿಂದ ಬರುವ ಮಕ್ಕಳಿಗೆ ತೊಂದರೆಯಾಗಬಾರದೆಂದು ಉಚಿತವಾಗಿ ಬಸ್‌ಗಳ ವ್ಯವಸ್ಥೆ ಮಾಡಲಾಗುವುದು. ಡ್ರೈವರ್, ಕಂಡಕ್ಟರ್‌ಗೆ ಸಂಬಳ, ಸ್ವಂತ ಖರ್ಚಿನಿಂದ ಬಸ್‌ಗೆ ಡೀಸೆಲ್ ತುಂಬಿಸಲಾಗುವುದು. ಕರ್ನಾಟಕ ರಾಜ್ಯದಲ್ಲಿ ಯಾವ ಶಾಸಕರು ಇಂತಹ ಪುಣ್ಯಸಾರ್ಥಕವಾದ ಕೆಲಸ ಮಾಡಿಲ್ಲ ಎಂದು ಹೇಳಿದರು.

ಶಿಕ್ಷಣದಿಂದಯಾರುವಂಚಿತರಾಗಬಾರದೆಂದು ಸರ್ಕಾರ ಮಧ್ಯಾಹ್ನದ ಬಿಸಿಯೂಟ, ಪಠ್ಯಪುಸ್ತಕ, ಶೂ, ಸಾಕ್ಸ್ ನೀಡುತ್ತಿದೆ. ನನಗೆ ಜಾತಿ, ಧರ್ಮ ಗೊತ್ತಿಲ್ಲ. ಎಲ್ಲರನ್ನು ಸಮಾನವಾಗಿ ಕಾಣುವ ರಾಜಕಾರಣಿ. ಆದ್ದರಿಂದ ಕಳೆದ 31 ವರ್ಷಗಳಿಂದಲೂ ಶಾಸಕನಾಗಿದ್ದೇನೆ. ನಿಮ್ಮಗಳ ಋಣ ನನ್ನ ಮೇಲಿದೆ. ತೀರಿಸುವ ಕೆಲಸ ಮಾಡುತ್ತಿದ್ದೇನೆಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಯಶೋಧಮ್ಮ, ಚಂದ್ರಣ್ಣ, ಪ್ರವೀಣ್, ಸದಸ್ಯರುಗಳಾದ ಭಾಗ್ಯಮ್ಮ, ಸುಬಾನ್‌ಸಾಬ್, ಹನುಮಂತಪ್ಪ, ಪ್ರಹ್ಲಾದ್, ಪಾರ್ವತಮ್ಮ ರಾಜಣ್ಣಪ್ರಸನ್ನಕುಮಾರ್ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ವಾರ್ತಾ ಇಲಾಖೆ ಎನ್.ಚನ್ನಕೇಶವ ವಯೋನಿವೃತ್ತಿ, ಬೀಳ್ಕೊಡುಗೆ



» **ದಾವಣಗೆರೆ**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಗ್ರೂಪ್ 'ಡಿ' ಹುದ್ದೆಯಲ್ಲಿ ಸೇವೆ ಸಲ್ಲಿಸಿ ಫೆಬ್ರವರಿ 28 ರಂದು ವಯೋನಿವೃತ್ತಿ ಹೊಂದಿದ ಎನ್.ಚನ್ನಕೇಶವ ಇವರಿಗೆ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಂದ ಮಾರ್ಚ್ 7 ರಂದು ಕಚೇರಿಯಲ್ಲಿ ಆತ್ಮೀಯ ಬೀಳ್ಕೊಡುಗೆ ನೀಡಲಾಯಿತು.

ಚನ್ನಕೇಶವ ಇವರು 26 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದು ಚಿಕ್ಕಮಗಳೂರು ಜಿಲ್ಲೆಯ ತರೀಕೆರೆಯಲ್ಲಿದ್ದ ಉಪವಿಭಾಗ ವಾರ್ತಾ ಕಚೇರಿಯಲ್ಲಿ ಸೇವೆ ಆರಂಭಿಸಿದ್ದು ದಾವಣಗೆರೆಗೆ ವರ್ಗಾವಣೆಯಾಗಿ ಇಲ್ಲಿ ಸುಧೀರ್ಘ ಸೇವೆ ಸಲ್ಲಿಸಿ 2025 ರ ಫೆಬ್ರವರಿಯಲ್ಲಿ ನಿವೃತ್ತಿ ಹೊಂದಿದ್ದಾರೆ.

ಚನ್ನಕೇಶವ ಇವರು ಪ್ರತಿನಿತ್ಯ ಕಚೇರಿಗೆ ಬರುವ ಪತ್ರಿಕೆಗಳನ್ನು ಜೋಡಿಸುವುದು ಸೇರಿದಂತೆ ಕಚೇರಿಯ ಕೆಲಸಗಳನ್ನು ಬಹಳ ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದರು ಎಂದು ಅವರ ಸೇವೆಯನ್ನು ಹಿರಿಯ ಸಹಾಯಕ ನಿರ್ದೇಶಕ ಧನಂಜಯ ಅವರು ಸ್ಮರಿಸಿದರು.

ಈ ವೇಳೆ ಕೆಎಸ್‌ಎಂಸಿಎ ಶಾಖಾ ವ್ಯವಸ್ಥಾಪಕರಾದ ಮಾರುತಿ ಆರ್, ಪ್ರದಸ ವೆಂಕಟೇಶ್, ಹಿರಿಯ ಚಾಲಕರಾದ ಗಂಗಾಧರಯ್ಯ ಜಿ, ಚಂದ್ರಶೇಖರ್, ತಿಪ್ಪೇಸ್ವಾಮಿ ಟಿ, ಸಿಬ್ಬಂದಿ ಶೈಲಾ, ನಿವೃತ್ತರಾದ ಬಸವರಾಜ್ ಈ ವೇಳೆ ಉಪಸ್ಥಿತರಿದ್ದು ಬೀಳ್ಕೊಡುಗೆ ನೀಡಿದರು.

## ಪ್ರಮುಖ ಸುದ್ದಿ

# ಹಲಾಲ್ ಬಜೆಟ್ ಟೀಕೆ-ಬಿಜೆಪಿಯವರ ಕೊಳಕು ಮನಸ್ಥಿತಿ: ಸಿಎಂ ಸಿದ್ದರಾಮಯ್ಯ

» **ಬೆಂಗಳೂರು**



2025-26ನೇ ಸಾಲಿನ ಬಜೆಟ್ ಗಾತ್ರ 4,09,549 ಕೋಟಿಯಾಗಿದ್ದು, ಮೊದಲ ಬಾರಿಗೆ ರಾಜ್ಯದ ಆಯವ್ಯಯ ಗಾತ್ರ 4 ಲಕ್ಷ ಕೋಟಿ ರೂ.ಗಳ ಗಡಿ ದಾಟಿರುವುದು ಒಂದು ಹೊಸ ಮೈಲಿಗಲ್ಲು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ವಿಧಾನಸೌಧದಸಮ್ಮೇಳನ ಸಭಾಂಗಣದಲ್ಲಿ ಇಂದು 2025-26 ನೇ ಸಾಲಿನ ಆಯವ್ಯಯ ಕುರಿತಂತೆ ಇಂದು ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

**ಆಯವ್ಯಯ ಗಾತ್ರ:** 2025-26 ನೇ ಸಾಲಿನ ಮುಂಗಡ ಪತ್ರವನ್ನು ಮಂಡಿಸಲಾಗಿದ್ದು, ಕರ್ನಾಟಕ ಸರ್ಕಾರ ಕಳೆದ ಸಾಲಿನಲ್ಲಿ 3,71,121 ಕೋಟಿ ಬಜೆಟ್ ಮಂಡಿಸಿತ್ತು. ಈ ಬಾರಿಯ ಬಜೆಟ್ ಗಾತ್ರ 4,09,549 ಕೋಟಿಯಾಗಿದೆ. ಮೊದಲ ಬಾರಿಗೆ ನಮ್ಮ ರಾಜ್ಯದ ಆಯವ್ಯಯ ಗಾತ್ರ 4 ಲಕ್ಷ ಕೋಟಿ ರೂ.ಗಳ ಗಡಿ ದಾಟಿರುವುದು ಒಂದು ಹೊಸ ಮೈಲಿಗಲ್ಲು. ಕಳೆದ ಬಾರಿಗಿಂತ ಈ ಬಾರಿ 38166 ಕೋಟಿ ರೂ.ಗಳು ಹೆಚ್ಚಾಗಿದೆ. ಬಜೆಟ್ ನ ಬೆಳವಣಿಗಯ ದರ 10.3 ರಷ್ಟು ಹೆಚ್ಚಳವಾಗಿದೆ.

**ರಾಜಸ್ವ ಸ್ವೀಕೃತಿ:** ಕಳೆದ ವರ್ಷ ರಾಜಸ್ವ ಸ್ವೀಕೃತಿಗಳು, 263178 ಕೋಟಿ ಇದ್ದು ಈ ಬಾರಿ 2,92,477 ಕೋಟಿ ರೂ. ಇದೆ. 2024-25ರ ಆಯವ್ಯಯಕ್ಕೆ ಹೋಲಿಸಿದರೆ 29,299 ಕೋಟಿ ಹೆಚ್ಚಾಗಿದೆ ಬೆಳವಣಿಗೆ ದರ 11.1 % ರಷ್ಟಿದೆ. 2024-25ರ ರಲ್ಲಿ ರಾಜಸ್ವ ವೆಚ್ಚ 2,90,531 ಕೋಟಿ ಇದ್ದದ್ದು, 2025-26ರಲ್ಲಿ 3,11,739 ಕೋಟಿ , 2024-25ರ ಆಯವ್ಯಯಕ್ಕೆ ಹೋಲಿಸಿದರೆ 21,207 ಕೋಟಿ ಹೆಚ್ಚಳ-ಬೆಳವಣಿಗೆ ದರ 7.3 % ರಷ್ಟಿದೆ ಎಂದರು.

**ವಿತ್ತೀಯ ಶಿಸ್ತು:** 2024-25ರಲ್ಲಿ ಸಾಲ 1,05,246 ಕೋಟಿ , ಈ ವರ್ಷ ಸಾಲ 1,16,000 ಕೋಟಿ , 2024-25ರ ಆಯವ್ಯಯಕ್ಕೆ ಹೋಲಿಸಿದರೆ 10,754 ಕೋಟಿ ಹೆಚ್ಚಳವಾಗಿದೆ(10.2% ರಷ್ಟು ಹೆಚ್ಚಳ). ಇದಕ್ಕೆ ವಿರೋಧಪಕ್ಷದವರು ಟೀಕಿಸುತ್ತಾರೆ. ನಮಗೆ ಸಾಲ ಮಾಡುವಅವಕಾಶವೆಷ್ಟಿದೆ. ಆರ್ಥಿಕಹೊಣಗಾರಿಕೆ ಅಧಿನಿಯಮದ ಮಾನದಂಡದಂತೆ, ಸಾಲದ ಮೊತ್ತ ಉಖಆಕ ಯ ಶೇ.25 ರಷ್ಟಿರಬೇಕು, ರಾಜ್ಯ ಶೇ.24.91 ರಷ್ಟರ ಮಿತಿಯಲ್ಲಿದೆ. ವಿತ್ತೀಯ ಕೊರತೆಯನ್ನು ಉಖಆಕಯ ಶೇ.3 ರಷ್ಟನ್ನು ಮೀರಬಾರದೆಂದಿದ್ದು, 2.95 % ರಷ್ಟಿದೆ ಎಂದರು.

**ಸರ್ಕಾರದ ಆರ್ಥಿಕ ಶಿಸ್ತು ಪಾಲನೆ:** ರಾಜಸ್ವ ಕೊರತೆ 19262 ಕೋಟಿ ಇದೆ . ಈ ಬಾರಿ ರಾಜಸ್ವ ಕೊರತೆಯಿಂದ ರಾಜಸ್ವ ಹೆಚ್ಚುವರಿ ಸ್ಥಿತಿಗೆ ಬರಲಿದ್ದೆವೆ. 2024-25 ರಲ್ಲಿ ರಾಜಸ್ವ ಕೊರತೆ 0.95 ಇತ್ತು, 2025-26ರಲ್ಲಿ 0.63 ಆಗಿದೆ. ರಾಜ್ಯದ ಉಖಆಕ ಕಳೆದ ವರ್ಷ 28,61929 ಕೋಟಿಗಳಾಗಿತ್ತು, 2025-26 ರಲ್ಲಿ 30,70,103 ಕೋಟಿಯಾಗಿದೆ, ಇದರಲ್ಲಿ ಶೇ. 25 ರಷ್ಟು ಸಾಲ ಪಡೆಯಬಹುದಾಗಿದ್ದು, ಸರ್ಕಾರ ಆರ್ಥಿಕ ಶಿಸ್ತನ್ನು ಪಾಲನೆ ಮಾಡಿದೆ .ಆಯವ್ಯಯದಲ್ಲಿ ಬಡವರು, ಮಹಿಳೆಯರು, ಕಾರ್ಮಿಕರು, ದುರ್ಬಲರಿಗೆ, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರ ಆರ್ಥಿಕ ಬೆಳವಣಿಗೆಗೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ವಿವರಿಸಿದರು.

**ಬಿಜೆಪಿಯವರಿಗೆ ದಿವಾಳಿ ಪದದ ಅರ್ಥ ಗೊತ್ತೇ?:**

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಆರ್ಥಿಕ ಹೊಣಗಾರಿಕೆ ಅಧಿನಿಯಮದ ಬಗ್ಗೆ ತಿಳಿಯದೇ, ನಮ್ಮ ಆಯವ್ಯಯದ ಬಗ್ಗೆ ಟೀಕೆ ಮಾಡುತ್ತಿದ್ದಾರೆ. ಆದರೆ ಕೇಂದ್ರ ಸರ್ಕಾರದ ವಿತ್ತೀಯ ಕೊರತೆ ಶೇ. 4.61 ರಷ್ಟಿದೆ. ಆದರೆ ರಾಜ್ಯದ ವಿತ್ತೀಯ ಕೊರತೆ ಶೇ.2.95 ರಷ್ಟಿದೆ. ಕೇಂದ್ರಸರ್ಕಾರದ ಬಜೆಟ್ 50 ಲಕ್ಷ ಕೋಟಿಯಲ್ಲಿ 15.66 ಲಕ್ಷ ಕೋಟಿ ಸಾಲ ಪಡೆದಿದ್ದು( ಶೇ.56 ಸಾಲ), ರಾಜ್ಯ 2.95 ರಷ್ಟು ಸಾಲ ಪಡೆದಿದ್ದೇವೆ. ಅಶೋಕ್ ರವರು ರಾಜಕೀಯಕ್ಕಾಗಿ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕೆ ಮಾಡುತ್ತಿದ್ದಾರೆ. ಬಿಜೆಪಿಯವರಿಗೆ ದಿವಾಳಿ ಪದದ ಅರ್ಥ ಗೊತ್ತೇ? ರಾಜ್ಯಸರ್ಕಾರ ಆರ್ಥಿಕವಾಗಿ ಸದೃಢವಾಗಿದ್ದು, ಆರ್ಥಿಕ ಶಿಸ್ತನ್ನು ಪಾಲಿಸಲಾಗುತ್ತಿದೆ.

### ಚುನಾವಣಾ ಆಯೋಗದಿಂದ ಎಲ್ಲಾ ರಾಜ್ಯ/ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಎರಡು ದಿನಗಳ ಸಮ್ಮೇಳನ

» **ಚಿತ್ರದುರ್ಗ**

ಭಾರತೀಯ ಚುನಾವಣಾ ಆಯೋಗದಿಂದ ಎಲ್ಲಾ ರಾಜ್ಯಗಳ/ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನವನ್ನು ಮಾರ್ಚ್ 04 ಮತ್ತು 05 ರಂದು ಇಂಡಿಯಾ ಇಂಟರ್ ನ್ಯಾಶನಲ್ ಇನ್ಸಿಟಿಟ್ಯೂಟ್ ಆಫ್ ಡೆಮಾಕ್ರಸಿ & ಎಲೆಕ್ಷನ್ ಮ್ಯಾನೇಜ್‌ಮೆಂಟ್, ನವದೆಹಲಿ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಭಾರತ ಮುಖ್ಯ ಚುನಾವಣಾಧಿಕಾರಿಗಳಾಗಿ ನೇಮಕವಾಗಿರುವ ಜ್ಞಾನೇಶ್ ಕುಮಾರ್ ಅಧಿಕಾರ ವಹಿಸಿಕೊಂಡ ನಂತರ ಹಮ್ಮಿಕೊಳ್ಳಲಾಗಿರುವ ಮೊದಲ ಸಮ್ಮೇಳನ ಇದಾಗಿದೆ. ಮೊದಲನೆಯದಾಗಿ ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಸಮ್ಮೇಳನದಲ್ಲಿ ಭಾಗವಹಿಸುವಂತೆ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು (ಡಿ.ಇ.ಓ) ಮತ್ತು ಚುನಾವಣಾ ನೋಂದಣ ಅಧಿಕಾರಿಗಳನ್ನು (ಇ.ಆರ್.ಓ) ನಾಮನಿರ್ದೇಶನ ಮಾಡಲು ಸೂಚನೆ ನೀಡಲಾಗಿದೆ.ಶಾಸನಬದ್ಧ ಅಧಿಕಾರಿಗಳಾಗಿ, ಎಲ್ಲಾ ರಾಜ್ಯ / ಕೇಂದ್ರಾಡಳಿತ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಚುನಾವಣಾ ನೋಂದಣಾ ಅಧಿಕಾರಿಗಳು (ಇ.ಆರ್.ಓ) ರಾಜ್ಯ, ಜಿಲ್ಲಾ ಮತ್ತು ವಿಧಾನಸಭಾ ಕ್ಷೇತ್ರದ ಮಟ್ಟದಲ್ಲಿ ಪ್ರಮುಖ ಕಾರ್ಯಗಳನ್ನು ನಿರ್ವಹಿಸಲು ಈ ಸಮ್ಮೇಳನವು ಅಗತ್ಯ ಮಾಹಿತಿಯನ್ನು ಒದಗಿಸಲಿದೆ. ಅಲ್ಲದೆ ಎರಡು ದಿನಗಳ ಈ ಸಮ್ಮೇಳನವು ಪರಸ್ಪರರ ಅನುಭವಗಳಿಂದ ಬುದ್ದಿಮತ್ತೆ ಮತ್ತು ಪರಸ್ಪರ ಕಲಿಕೆಗೆ ರಾಜ್ಯಗಳು / ಕೇಂದ್ರಾಡಳಿತ ಚುನಾವಣಾ ಅಧಿಕಾರಿಗಳಿಗೆ ಒಂದು ವೇದಿಕೆಯನ್ನು ನೀಡುತ್ತದೆ. ಸಮ್ಮೇಳನದ ಮೊದಲನ ದಿನ ಆಧುನಿಕ ಚುನಾವಣಾ ನಿರ್ವಹಣೆಯ ಪ್ರಮುಖ ಕ್ಷೇತ್ರಗಳ ಬಗ್ಗೆ ಮಾಹಿತಿ ತಂತ್ರಜ್ಞಾನ, ಪರಿಣಾಮಕಾರಿ ಸಂವಹನ, ಸಾಮಾಜಿಕ ಮಾಧ್ಯಮವನ್ನು ಹೆಚ್ಚಿಸುವುದು ಮತ್ತು ಚುನಾವಣಾ ಪ್ರಕ್ರಿಯೆಗಳಲ್ಲಿ ವಿಭಿನ್ನ ಕಾರ್ಯಕರ್ತರ ಶಾಸನಬದ್ಧ ಪಾತ್ರದ ಕುರಿತು ಚರ್ಚೆಗಳನ್ನು ನಡೆಸಲಿದೆ.ಎರಡನೇ ದಿನ, ರಾಜ್ಯಗಳು/ಕೇಂದ್ರಾಡಳಿತದ ಮುಖ್ಯ ಚುನಾವಣಾಧಿಕಾರಿಗಳು ಹಿಂದಿನ ದಿನದ ವಿಷಯಾಧಾರಿತ ಚರ್ಚೆಗಳ ಕುರಿತು ಆಯಾ ಕ್ರಿಯಾ ಯೋಜನೆಯನ್ನು ಪ್ರಸ್ತುತಪಡಿಸುತ್ತಾರೆ ಎಂದು ಭಾರತ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ತಿಳಿಸಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T